# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 175 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 30–01–2025 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 175 | RNI No: KARKAN/2023/88462 | KA/SK/CTA-874/2024-2026 | Chitradurga | Date: 30-01-2025 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಒಳ ಮೀಸಲು ಜಾರಿಗಾಗಿ ಒತ್ತಾಯಿಸಿ ಮಾದಿಗ ಸಮುದಾಯ ಒಕ್ಕೂಟ ಪ್ರತಿಭಟನೆ 2

ಹೊಸದುರ್ಗ ಹಾಲು ಉತ್ಪಾದನೆಯಲ್ಲಿ ಉತ್ತಮ ಗುಣಮಟ್ಟ ಹೊಂದಿದೆ 3

18 ತುಂಬುತ್ತಿರುವ ಸಮಯದಲ್ಲಿ ಮಗನಿಗೆ ತಂದೆಯೊಬ್ಬನ ಬುದ್ಧಿ ಮಾತುಗಳು........ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ನ್ಯಾಷನಲ್ ಸಪಕ್ ಟಕ್ರಾ ಚಾಂಪಿಯನ್ ಶಿಪ್ ಕ್ರೀಡಾಕೂಟ ಪಾಲ್ಗೊಂಡ ವಿದ್ಯಾರ್ಥಿ ಸ್ನೇಹ.

» **ಚಳ್ಳಕೆರೆ**



ಆಂಧ್ರ ಪ್ರದೇಶದ ನಂದ್ಯಾಲದಲ್ಲಿ ಬಾಲಕಿಯರ ಜೂನಿಯರ್ ನ್ಯಾಷನಲ್ ಸಪಕ್‌ಟಕ್ರಾಚಾಂಪಿಯನ್ ಶಿಪ್ ಕ್ರೀಡಾಕೂಟ ಪಾಲ್ಗೊಂಡಿದ್ದಾರೆ. ಚಳ್ಳಕೆರೆಯ ಹೊಂಗಿರಣ ಶಾಲೆಯ 8ನೇ ತರಗತಿ ವಿದ್ಯಾರ್ಥಿನಿ ವಿ.ಸ್ನೇಹ ಆಯ್ಕೆಯಾಗಿದ್ದು, ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಹಿನ್ನೆಲೆಯಲ್ಲಿ ವಿ.ಸ್ನೇಹರವರನ್ನು ಅಭಿನಂಧಿಸಿ ಗೆಲುವು ಸಾಧಿಸುವಂತೆ ಶುಭಹಾರಿಸಲಾಯಿತು. ಅದ್ಯಕ್ಷ ದಯಾನಂದ, ವೀರೇಶ್ ಹಾಗೂ ಶಿಕ್ಷಕರ ಸಮೂಹ, ಪೋಷಕರು ಅಭಿನಂದಿಸಿದೆ.

### ಜ.30ರಂದು ಓರಿಯಂಟೇಶನ್ ತರಬೇತಿ

» **ಚಿತ್ರದುರ್ಗ**

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಇದೇ ಜ.30 ರಂದು ಜಿಲ್ಲಾ ನ್ಯಾಯಾಲಯ ಆವರಣದಲ್ಲಿನ ಮಧ್ಯಸ್ಥಿಕೆ ಕೇಂದ್ರದಲ್ಲಿ ಓರಿಯಂಟೇಷನ್ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಜ.30ರಂದು ಬೆಳಿಗ್ಗೆ 10.15ಕ್ಕೆ ಎನ್‌ಎಲ್‌ಎಸ್‌ಎ (ಮಕ್ಕಳಿಗಾಗಿ ಮಕ್ಕಳ ಸ್ನೇಹಿ ಕಾನೂನು ಸೇವೆಗಳು) ಯೋಜನೆ, 2024ರ ಅಡಿಯಲ್ಲಿ ರಚಿಸಲಾದ "ಮಕ್ಕಳ ಕಾನೂನು ಸೇವೆಗಳ ಘಟಕದ ಸದಸ್ಯರಿಗಾಗಿ ಹಾಗೂ ಇದೇ ದಿನ ಮಧ್ಯಾಹ್ನ 2.15 ಗಂಟೆಗೆ ಎನ್‌ಎಲ್‌ಎಸ್‌ಎ (ಮಾನಸಿಕ ಅಸ್ವಸ್ಥ ವ್ಯಕ್ತಿಗಳಿಗೆ ಮತ್ತು ಬೌದ್ಧಿಕ ಅಸಾಮಾರ್ಥ್ಯ ಹೊಂದಿರುವ ವ್ಯಕ್ತಿಗಳಿಗೆ ಕಾನೂನು ಸೇವೆಗಳು) ಯೋಜನೆ–2024 ಅಡಿಯಲ್ಲಿ ರಚಿಸಲಾದ ಕಾನೂನು ಸೇವೆಗಳ ಘಟಕ "ಮನೋ ನ್ಯಾಯ್" ಸದಸ್ಯರಿಗಾಗಿ ಓರಿಯಂಟೇಶನ್ ತರಬೇತಿ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ರೋಣ ವಾಸುದೇವ್ ಅವರು ಉದ್ಘಾಟನೆ ನೆರವೇರಿಸುವರು. ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ನಾಡಿಗ ಜಯಸ್ವಾಮಿ ಉಪನ್ಯಾಸ ನೀಡುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಅಧ್ಯಕ್ಷತೆ ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಜಿಲ್ಲಾ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಹಕಾರ ಸಂಘ ನಿಗಮ ಸ್ಥಾಪನೆ

» **ದಾವಣಗೆರೆ**

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಗೂ ವಿವಿಧ ನಿಗಮ, ಮಂಡಳಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆಯಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರು, ಕಾರ್ಮಿಕರಿಗೆ ವೇತನ ಪಾವತಿ ಮತ್ತು ಕಾನೂನಾತ್ಮಕವಾಗಿನೀಡಬೇಕಾದಸೌಲಭ್ಯಗಳನ್ನು ಒದಗಿಸುವ ಸಲುವಾಗಿ ದಾವಣಗೆರೆ ಜಿಲ್ಲಾ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಹಕಾರ ಸಂಘ ನಿಗಮವನ್ನು ನೂತನವಾಗಿ ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದ್ದಾರೆ. ಈಗಾಗಲೇ ವಿವಿಧ ಸಂಸ್ಥೆಗಳ ಮೂಲಕ ಹೊರಗುತ್ತಿಗೆಯಡಿ ಟೆಂಡರ್ ಮೂಲಕ ಸೇವೆಯನ್ನು ಸಲ್ಲಿಸಲಾಗುತ್ತಿದ್ದು ಈ ಎಲ್ಲಾ ಹೊರಗುತ್ತಿಗೆ ನೌಕರರು ಇನ್ನು ಮುಂದೆ ದಾವಣಗೆರೆ ಜಿಲ್ಲಾ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಹಕಾರ ಸಂಘದಡಿಯಲ್ಲಿ ಕೆಲಸ ನಿರ್ವಹಿಸುವರು. ಈ ನೌಕರರಿಗೆ ಜಿಲ್ಲಾ ಸಂಘದಿಂದಲೇ ನೇರವಾಗಿ ವೇತನ ಹಾಗೂ ಇತರೆ ಸೌಲಭ್ಯಗಳನ್ನು ನೀಡಲಾಗುತ್ತದೆ. ಹೊರಗುತ್ತಿಗೆ ನೌಕರರೇ ಈ ಸಹಕಾರ ಸಂಘದ ಸದಸ್ಯರಾಗಿರುವರು. ಆದ್ದರಿಂದ ಹೊರಗುತ್ತಿಗೆ ನೌಕರ ಸಿಬ್ಬಂದಿಯವರು ಸಂಘದ ಸದಸ್ಯತ್ವ ಪಡೆಯಬಹುದಾಗಿದ್ದು ತಮ್ಮ ಇಲಾಖೆ ಮುಖ್ಯಸ್ಥರುಗಳಿಂದ ಅರ್ಜಿ ಪಡೆದು ನೊಂದಣಿ ಮಾಡಿಕೊಳ್ಳಲು ತಿಳಿಸಿದ್ದಾರೆ.

# ಶಿಕ್ಷಣ ಕ್ಷೇತ್ರ ಅಭಿವೃದ್ದಿಗೆ 40 ಕೋಟಿ ಖರ್ಚು

## ಗುಣಾತ್ಮಕ ಶಿಕ್ಷಣದಿಂದ ಮಾತ್ರ ವಿದ್ಯಾರ್ಥಿಗಳ ಪ್ರಗತಿ: ಉತ್ತಮ ಕಾರ್ಯದಿಂದ ಶಿಕ್ಷಣ ಇಲಾಖೆಯ ಗೌರವ ಹೆಚ್ಚಿಸಿ: ರಘುಮೂರ್ತಿ





» **ಚಳ್ಳಕೆರೆ**

ಪ್ರಸ್ತುತ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಶಿಕ್ಷಣ ಕ್ಷೇತ್ರದ ಸರ್ವತೋಮುಖ ಅಭಿವೃದ್ದಿಯ ಬಗ್ಗೆ ಹೆಚ್ಚು ಒತ್ತು ನೀಡುತ್ತಿದ್ದಾರೆ.

ವಿಧಾನಸಭಾ ಕ್ಷೇತ್ರದಲ್ಲಿ 2022–25ರ ಅವಧಿಯಲ್ಲಿ ಒಟ್ಟು 40 ಕೋಟಿ ಹಣವನ್ನು ವಿವಿಧ ಹಂತದಲ್ಲಿ ಬಿಡುಗಡೆ ಮಾಡಲಾಗಿದೆ.

ಇತ್ತೀಚಿಗಷ್ಟೇ ಕ್ಷೇತ್ರದ ಸರ್ಕಾರಿ ಶಾಲೆಗಳ ತುರ್ತು ರಿಪೇರಿಗೆ 62 ಲಕ್ಷ ಹಣವನ್ನು ನೀಡಿದ್ದು, ಶಿಕ್ಷಣ ಕ್ಷೇತ್ರವನ್ನು ಉನ್ನತ್ತಿಪಡಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ ಎಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಬುಧವಾರ ತಾಲ್ಲೂಕಿನ ಚೌಳೂರು ಗ್ರಾಮದ ಅಲ್ಲಿಪೀರ್‌ಸ್ವಾಮಿಮಠದ ಆವರಣದಲ್ಲಿ ಪರಶುರಾಮಪುರ ಹೋಬಳಿ ಮಟ್ಟದ ಶಿಕ್ಷಕರ ಒಂದು ದಿನದ ಕಾರ್ಯಗಾರ ಹಾಗೂ ಸಾವಿತ್ರಿಬಾಯಿಪುಲೆ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ ಸರ್ವಪಲ್ಲಿರಾಧಕೃಷ್ಣನ್ ಮತ್ತು ಸಾವಿತ್ರಿಬಾಯಿಪುಲೆ ಆದರ್ಶಗಳನ್ನು ಶಿಕ್ಷಕರು ಮೈಗೂಡಿಸಿಕೊಳ್ಳಬೇಕು ಎಂದರು. ಕ್ಷೇತ್ರದ ಎಲ್ಲಾ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡಿ ಅವರ ಬದುಕಿಗೆ ಭದ್ರಬುನಾದಿ ಒದಗಿಸುವ ಗುರಿ ಶಿಕ್ಷಕರ ಮೇಲಿದೆ.

ಶಿಕ್ಷಣ ಇಲಾಖೆಯ ಹಲವಾರು ಸಮಸ್ಯೆಗಳಿಗೆ ಪರಿಹಾರ ನೀಡಲಾಗಿದೆ. ಆದರೆ, ಫಲಿತಾಂಶವನ್ನು ಉತ್ತಮ ಪಡಿಸುವ ನಿಟ್ಟಿನಲ್ಲಿ ಎಲ್ಲಾ ಶಿಕ್ಷಕರು ದಕ್ಷತೆ, ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಿ ಶಿಕ್ಷಣ ಕ್ಷೇತ್ರದ ಹಿರಿಮೆ ಸದೃಢಗೊಳಿಸಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಡಿಡಿಪಿಐ ಮಂಜುನಾಥ, ಕಳೆದ ಹಲವಾರು ವರ್ಷಗಳಿಂದ ಈ ಕ್ಷೇತ್ರದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ನಿರೀಕ್ಷಿತ ಪ್ರಗತಿ ಸಾಧಿಸಲು ಶಿಕ್ಷಣ ಇಲಾಖೆ ಪ್ರಾಮಾಣಿಕ ಪ್ರಯತ್ನ ನಡೆಸಿದೆ. ಶಾಲಾ ಹಂತದಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ ಬಿಇಒ ನೇತೃತ್ವದಲ್ಲಿ ವಿಷಯ ಪರಿಣಿತರ ಗುಂಪುರಚಿಸಿ ಎಲ್ಲೆಡೆ ವಿದ್ಯಾರ್ಥಿಗಳಿಗೆ ಎಲ್ಲಾ ವಿಷಯಗಳ ಸಂಬಂಧಿಸಿದ ಬೋಧನೆ ನೀಡಲಾಗುತ್ತಿದೆ. ಶಿಕ್ಷಣದಿಂದ ಮಾತ್ರ ಶೈಕ್ಷಣಿಕ ಅಭಿವೃದ್ದಿ ಸಾಧ್ಯವೆಂದರು.

ಕಾರ್ಯಕ್ರಮದಲ್ಲಿ ಉತ್ತಮ ಸೇವೆ ಸಲ್ಲಿಸಿದ ಹಲವಾರು ಶಿಕ್ಷಕಿಯರಿಗೆ ಶಾಸಕರು ಸನ್ಮಾನಿಸಿದರು. ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಕೆಡಿಪಿ ಸದಸ್ಯ ಚೌಳೂರು ಬಸವರಾಜು, ಬಿಇಒ ಕೆ.ಎಸ್.ಸುರೇಶ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಟಿ.ವೀರೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷ ರುದ್ರೇಶ್, ಬಿ.ಕೆ.ಗುಜ್ಜಾರಪ್ಪ ಮುಂತಾದವರು ಉಪಸ್ಥಿತರಿದ್ದರು.

**ಕ್ಯಾದಿಗುಂಟೆ ಕೆರೆಗೆ ಬಾಗಿನ ಅರ್ಪಣೆ** : ಪರಶುರಾಮಪುರ ಹೋಬಳಿಯ ಕ್ಯಾದಿಗುಂಟೆ ಕೆರೆ ಕಳೆದ ಹಲವಾರು ವರ್ಷಗಳಿಂದ ತುಂಬಿರಲಿಲ್ಲ. ಇತ್ತೀಚಿಗಷ್ಟೇ ತುಂಗಾ ಹಿನ್ನೀರು ಹರಿದ ಪರಿಣಾಮ ಕೆರೆ ಕೋಡಿಬಿದ್ದಿದ್ದು, ಶಾಸಕ ಟಿ.ರಘುಮೂರ್ತಿ ಬುಧವಾರ ಬಾಗಿನ ಅರ್ಪಿಸಿ ಪೂಜೆ ಸಲ್ಲಿಸಿದರು.



ಚಳ್ಳಕೆರೆ ತಾಲ್ಲೂಕಿನ ಪರಶುರಾಮಪುರ ಕ್ಯಾದಿಗುಂಟೆ ಕೆರೆಗೆ ಶಾಸಕ ಟಿ.ರಘುಮೂರ್ತಿ ಬಾಗಿನ ಅರ್ಪಿಸಿದರು.

### ಬಂಡೆತಿಮ್ಮಾಲಪುರ ವಿದ್ಯುತ್ ಸಮಸ್ಯೆ ನಿವಾರಣೆಗೆ ಮನವಿ



» **ಚಳ್ಳಕೆರೆ**

ತಾಲ್ಲೂಕಿನ ತಳಕು ಹೋಬಳಿಯ ಬಂಡೆತಿಮ್ಮಾಲಪುರ ಗ್ರಾಮದ ಮ್ಯಾರಸರಗಟ್ಟೆ, ತೋಟದ ಮನೆ ವಾಸಿಗಳು ರಾತ್ರಿ ವೇಳೆಯಲ್ಲಿ ಪ್ರತಿನಿತ್ಯ ವಿದ್ಯುತ್ ಸರಬರಾಜು ಇರದೆ ತೊಂದರೆ ಅನುಭವಿಸುತ್ತಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ತಳಕು ಬೆಸ್ಕಾಂ ಇಲಾಖೆ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಲಿಖಿತ ಮೂಲಕ ಮನವಿ ನೀಡಿ, ವಿದ್ಯುತ್ ತೊಂದರೆ ತಪ್ಪಿಸುವಂತೆ ವಿನಂತಿಸಿದ್ದಾರೆ.

ಪುಟ 2

**ಪ್ರಮುಖ ಸುದ್ದಿ**

# ಮಾನವಯಾವುದೇ ವಿಷಯ ಪ್ರಶ್ನಿಸದೇ ಒಪ್ಪಿಕೊಳ್ಳಬಾರದು

» **ಚಿತ್ರದುರ್ಗ**



ನಮ್ಮ ಜನಗಳಿಗೆ ವಿಜ್ಞಾನದ ಆವಿಷ್ಕಾರಗಳು ಬೇಕು ಆದರಿಂದ ಕಂಡು ಹಿಡಿದ ಮೊಬೈಲ್ .ಟಿ.ವಿ. ವಾಟ್ಸಾಪ್, ಕಾರುಗಳು ಬೇಕು, ಆದರೆ ವೈಜ್ಞಾನಿಕವಾದ ಚಿಂತನೆ ಬೇಡವಾಗಿದೆ ಎಂದು ರಾಷ್ಟ್ರೀಯ ವಿಚಾರವಾದಿಗಳ ಸಂಘ, ಕರ್ನಾಟಕದ ಅಧ್ಯಕ್ಷರಾದ ಪ್ರೊ. ನರೇಂದ್ರ ನಾಯಕ್ ತಿಳಿಸಿದರು.

ಚಿತ್ರದುರ್ಗ ನಗರದ ಹೊರವಲಯದ ಶ್ರೀ ಇಮ್ಮಡಿಗಿರಿ ನಗರದ ಭೋವಿಗುರುಪೀಠದ ಎಸ್.ಜೆ.ಎಸ್. ಸಮೂಹ ಸಂಸ್ಥೆವತಿಯಿಂದ ಎಸ್‌ಜೆಎಸ್ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ 'ವೈಜ್ಞಾನಿಕತೆಗಿರುವ ಸವಾಲುಹಾಗೂಪರಿಹಾರೋಪಾಯಗಳು" ವಿಚಾರ ಸಂಕಿರಣದಲ್ಲಿ ಮಾತನಾಡಿದರು.

ಮಾನವರಾದವರು ಯಾವುದೇ ವಿಷಯವನ್ನು ಪ್ರಶ್ನಿಸದೇ ಒಪ್ಪಿಕೊಳ್ಳಬಾರದು, ನಾವು ಯಾವುದನ್ನು ಪ್ರಶ್ನಿಸದೇ ಇರುವುದರಿಂದಲೇ ನಮ್ಮ ಮೇಲೆ ವಿವಿಧ ಜನತೆ ಗದಾ ಪ್ರಹಾರವನ್ನು ವಿವಿಧ ರೀತಿಯಲ್ಲಿ ಮಾಡುತ್ತಿದ್ದಾರೆ. ನಮ್ಮ ಸಂವಿಧಾನದಲ್ಲಿಯೇ ಕಲಂ 51ಎ. ಎಚ್ ಅಡಿಯಲ್ಲಿ ಜನತೆಯ ಕರ್ತವ್ಯಗಳು ಹಾಗೂ ಹಕ್ಕುಗಳನ್ನು ನೀಡಿದೆ ಇದರ ಬಗ್ಗೆ ಎಲ್ಲರು ತಿಳಿಯಬೇಕಿದೆ. ಇದನ್ನು ನಾವುಗಳು ಸಂವಿಧಾನ ಬದ್ಧವಾಗಿ ಈ ಕಾರ್ಯವನ್ನು ಮಾಡಬೇಕಿದೆ ಎಂದರು.

ಪ್ರಶ್ನಿಸುವ ಪ್ರವೃತ್ತಿ ಇಲ್ಲದಿದ್ದರೆ ಬೇರೆಯವರು ಹೇಳಿದ್ದನ್ನು ಕೇಳುವಂತ ಮನೋಭಾವ ಮೂಡುತ್ತದೆ. ಕೆಲವು ವಂಚಕರ ಜನರಲ್ಲಿ ಇರುವಂತ ಪ್ರಶ್ನಿಸುವ ಮನೋಭಾವ ಇಲ್ಲದಿರುವದನ್ನು ಮನಗಂಡು ಅದರ ಲಾಭವನ್ನು ಪಡೆಯುತ್ತಿದ್ದಾರೆ. ಇದರಿಂದ ಅವರನ್ನು ಶೋಷಣೆ ಮಾಡುತ್ತಿದ್ದಾರೆ. ಕೆಲಸವನ್ನು ಮಾಡದೇ ಜನರಿಗೆ ಸುಳ್ಳುಗಳನ್ನು ಜೋತಿಷ್ಯದ ಮೂಲಕ ತಿಳಿಸಿ ಸಂಖ್ಯಾಶಾಸ್ತ್ರ ಪವಾಡಗಳು, ಎಲ್ಲವು ಜನರನ್ನು ಮೋಸ ಮಾಡುವ ಬೇರೆ ಬೇರೆ ವಿಧಾನಗಳಾಗಿವೆ. ಇದಕ್ಕಿಂತ ಮಿಗಿಲಾಗಿ ಸ್ವರ್ಗ, ನರಕ ಇದೆಲ್ಲವನ್ನು ದುಡಿಯದ ವರ್ಗ ಸೃಷ್ಟಿ ಮಾಡಿ ದುಡಿಯುವ ವರ್ಗದ ಜನರನ್ನು ಶೋಷಣೆ ಮಾಡುತ್ತಿದೆ. ದುಡಿಯದ ವರ್ಗದವರು ಬೇರೆಯವರಿಗೆ ಸ್ವರ್ಗವನ್ನು ತೋರಿಸುತ್ತೇನೆ ಎಂದು ತಿಳಿಸಿ ಅವರನ್ನು ಭ್ರಮೆಯಲ್ಲಿ ಇರಿಸಿ ಕುಳಿತು ತಿನ್ನುವ ವರ್ಗ ಮನುಷ್ಯನ ಶೋಷಣೆಯ ಪ್ರವೃತ್ತಿಯಾಗಿದೆ ಎಂದು ವಿಷಾಧಿಸಿದರು.

ಇದನ್ನು ಬಯಲಿಗೆ ಎಳೆಯುವ ಕಾರ್ಯವಾಗಬೇಕಿದೆ. ಇದಕ್ಕೆ ವೈಜ್ಞಾನಿಕ ಚಿಂತನೆಯನ್ನು ಮೈಗೂಡಿಸಿಕೊಳ್ಳಬೇಕಿದೆ. ಜಗತ್ತಿನಲ್ಲಿ ಇಲ್ಲಿಯವರೆಗೆ ಆಗಿರುವ ಪ್ರಗತಿ ಇದರಿಂದಲೇ ಆಗಿದೆ. ಯಾವುದೇ ಭಕ್ತಿಯಿಂದಾಗಲಿ ಯಾವುದೆ ಮೌಢ್ಯದಿಂದಾಗಲಿ, ಪ್ರಗತಿಯನ್ನು ಹೊಂದಿಲ್ಲ, ಪ್ರಗತಿಯನ್ನು ಸಾಧಿಸಿದ್ದು ಬರೀ, ವೈಜ್ಞಾನಿಕ ಮನೋಭಾವದಿಂದ ಮಾತ್ರ, ನಮ್ಮ ಜನಗಳಿಗೆ ವಿಜ್ಞಾನದ ಆವಿಷ್ಕಾರಗಳು ಬೇಕು ಆದರಿಂದ ಕಂಡು ಹಿಡಿದ ಮೊಬೈಲ್ .ಟಿ.ವಿ. ವಾಟ್ಸಾಪ್, ಕಾರುಗಳು ಬೇಕು, ಆದರೆ ವೈಜ್ಞಾನಿಕವಾದ ಚಿಂತನೆ ಬೇಡವಾಗಿದೆ. ಇದಾದ ನಂತರ ಇದಕ್ಕೆ ಸಬೂಬನ್ನು ಹೇಳಲಾಗುತ್ತದೆ ಇದು ನಮ್ಮಲ್ಲೇ ಇತ್ತು ಸಾವಿರಾರು ವರ್ಷಗಳಿಂದ ಎಂದು ಈಗ ಚೀನಾ ದೇಶ ನಮ್ಮ ದೇಶಕ್ಕಿಂತ ಹಿಂದೆ ಇತ್ತು ಆದರೆ ಈಗ ಅದು ಎಲ್ಲ ದೇಶಗಳನ್ನು ಮೀರಿಸುವಂತೆ ಬೆಳೆದು ನಿಂತಿದೆ. ಜಪಾನ್ ದೇಶವೂ ಸಹಾ ಪ್ರಗತಿಯನ್ನು ಸಾಧಿಸಿದೆ, ಇದಕ್ಕೆಲ್ಲಾ ಕಾರಣ ಯಾವುದೇ ಮತ, ಧರ್ಮವಲ್ಲ, ಅಚರಣೆ ಅಲ್ಲ ಇದಕ್ಕೆ ಕಾರಣ ವೈಜ್ಞಾನಿಕ ಚಿಂತನೆಗಳಾಗಿವೆ. ಇದನ್ನು ಮೈಗೊಡಿಸಿಕೊಂಡಾಗ ಮಾತ್ರ ದೇಶ ಪ್ರಗತಿಯನ್ನು ಕಾಣಲು ಸಾಧ್ಯವಿದೆ. ಮೌಢ್ಯಗಳಿಂದ ದೇಶ ಪ್ರಗತಿ ಸಾಧ್ಯವಿಲ್ಲ ಇದನ್ನು ಸ್ಪಷ್ಟವಾಗಿ ನೆನಪು ಇಟ್ಟುಕೊಂಡರೆ ಮಾತ್ರ ದೇಶ ಬಲಿಷ್ಠವಾಗಿ ಬೆಳೆಯಲು ಸಾಧ್ಯವಿದೆ ಎಂದು ನುಡಿದರು.ವೈಜ್ಞಾನಿಕ ಚಿಂತನೆ ಎಂದರೆ ಬರೀ ತಂತ್ರಜ್ಞಾನವಲ್ಲ ಮೂಲಭೂತವಾದ ಸಂಶೋಧನೆಗಳು ನಡೆದಾಗ ಮಾತ್ರ ದೇಶದ ಗಂಭೀರವಾದ ವಿಷಯಗಳನ್ನು ಬಿಟ್ಟು ಕೆಲಸಕ್ಕೆ ಬಾರದ ವಿಷಯಗಳ ಬಗ್ಗೆ ಗಹನವಾದ ಚರ್ಚೆಯ ಬಗ್ಗೆತಲೆಕೆಡಿಸಿಕೊಳ್ಳಲಾಗುತ್ತಿದ್ದೇವೆ.ಇಂದಿನ ವೈಭವದಲ್ಲಿ ನಮ್ಮನ್ನು ಮರೆಯಲಾಗುತ್ತಿದೆ. ಇದನ್ನು ಬಿಟಟು ವಾಸ್ತವಿಕತೆಯನ್ನು ಅರ್ಥ ಮಾಡಿಕೊಂಡಾಗ ಮಾತ್ರ ದೇಶ ಪ್ರಗತಿ ಹೊಂದಲು ಸಾಧ್ಯವಿದೆ ಎಂದು ನರೇಂದ್ರ ನಾಯ್ಕ ಭವಿಷ್ಯ ನುಡಿದರು.

## ಫಾಸ್ಟ್ ನ್ಯೂಸ್

### ವಿದ್ಯುತ್ ಸಮಸ್ಯೆ ನಿವಾರಣೆಗೆ ಮನವಿ

» ಮೊದಲ ಪುಟದಿಂದ

ಬಂಡೆತಿಮ್ಮಾಲಪುರ ಗ್ರಾಮಸ್ಥರಾದ ಮಲ್ಲಿಕಾರ್ಜುನ, ತ್ರಿಮೂರ್ತಿ, ಕೆ.ರಾಜಪ್ಪ ಮುಂತಾದವರು ತಳಕು ಬೆಸ್ಕಾಂ ಅಧಿಕಾರಿಗಳಿಗೆ ನೀಡಿನ ಮನವಿಯಲ್ಲಿ ಸದರಿ ಗ್ರಾಮದಲ್ಲಿ ಸರ್ಕಾರಿ ಶಾಲೆ ಇದ್ದು, ವಿದ್ಯುತ್ ತೊಂದರೆಯಿಂದ ವಿದ್ಯಾರ್ಥಿಗಳು ಸಕಾಲದಲ್ಲಿ ಓದಲು ಆಗುತ್ತಿಲ್ಲ, ಕರೆಂಟ್ ತೊಂದರೆಯಿಂದ ರೈತರು ಸಮಸ್ಯೆ ಎದುರಿಸುತ್ತಿದ್ದಾರೆ. ಆದ್ದರಿಂದ ಕೂಡಲೇ ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ. ಮನವಿ ಸ್ವೀಕರಿಸಿದ ತಳಕು ಎಇಇ ಮಮತ, ತಮ್ಮ ಮನವಿಯನ್ನು ಸ್ವೀಕರಿಸಿದ್ದು, ಆ ಭಾಗದ ವಿದ್ಯುತ್ ಸಮಸ್ಯೆ ನಿವಾರಣೆಗೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನ ಪಡೆದು ಶೀಘ್ರದಲ್ಲೇ ವ್ಯವಸ್ಥೆ ಮಾಡುವ ಭರವಸೆ ನೀಡಿರುತ್ತಾರೆ.

### ಜ.30ರಂದು ಜಾಗೃತಿ ಜಾಥಾಕ್ಕೆ ಚಾಲನೆ

» ಚಿತ್ರದುರ್ಗ

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನ ಕಾರ್ಯಕ್ರಮದಡಿಯಲ್ಲಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನವನ್ನು ಇದೇ ಜ.31 ರಿಂದ ಫೆ.13 ರವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಜಾಗೃತಿ ಮೂಡಿಸುವ ಸಲುವಾಗಿ ಜಾಥಾ ಕಾರ್ಯಕ್ರಮವನ್ನು ಇದೇ ಜ.30ರಂದು ಬೆಳಿಗ್ಗೆ 9.30ಕ್ಕೆ ನಗರದ ಜಿಲ್ಲಾ ಆಸ್ಪತ್ರೆ ಆವರಣದಿಂದ ಪ್ರಾರಂಭವಾಗಿ ಡೆಂಟಲ್ ಕಾಲೇಜುವರೆಗೆ ಹೋಗಿ ಮದಕರಿ ವೃತ್ತದಲ್ಲಿ ಕೊನೆಗೊಳ್ಳಲಿದೆ ಎಂದು ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿಗಳು ತಿಳಿಸಿದ್ದಾರೆ.

### 31ರಂದು ಅಂಬೇಡ್ಕರ್ ಓದು ಕಾರ್ಯಕ್ರಮ

» ಚಿತ್ರದುರ್ಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ಸ್ನಾತಕೋತ್ತರ ಅಧ್ಯಯನ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ಇದೇ ಜ.31ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಸರ್ಕಾರಿ ಕಲಾ ಕಾಲೇಜು ಪಿ.ಜಿ.ಸಭಾಂಗಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಓದು- ರಸಪ್ರಶ್ನೆ, ಪ್ರಬಂಧ, ಆಶುಭಾಷಣ, ಕವನ ವಾಚನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಲಾ ಕಾಲೇಜು ಪ್ರಾಂಶುಪಾಲ ಪ್ರೊ.ಬಿ.ಟಿ.ತಿಪ್ಪೇರುದ್ರಸ್ವಾಮಿ ಉದ್ಘಾಟಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ ಪ್ರಾಸ್ತಾವಿಕ ನುಡಿಗಳನ್ನಾಡುವರು. ಪ್ರಾಧ್ಯಾಪಕ ಹಾಗೂ ಕುವೆಂಪು ಭಾಷಾ ಭಾರತಿ ಸದಸ್ಯ ಪ್ರೊ. ಜೆ.ಕರಿಯಪ್ಪ ಮಾಳಿಗೆ ಅಧ್ಯಕ್ಷತೆ ವಹಿಸುವರು. ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಉಪನ್ಯಾಸಕ ಡಾ.ಜೆ.ಮೋಹನ್ ಉಪನ್ಯಾಸ ನೀಡುವರು. ವಕೀಲ ಎಂ.ರಮೇಶ್ ಪ್ರತಿಕ್ರಿಯೆ ನೀಡುವರು. ಮುಖ್ಯ ಅತಿಥಿಗಳಾಗಿ ಸರ್ಕಾರಿ ಕಲಾ ಕಾಲೇಜು ಐಕ್ಯೂಎಸಿ ಸಂಚಾಲಕರಾದ ಪ್ರೊ. ಆರ್.ತಾರಿಣಿ ಶುಭದಾಯಿನಿ, ಪರೀಕ್ಷಾ ನಿಯಂತ್ರಕ ಡಾ.ಬಿ.ಸುರೇಶ, ಕಾಲೇಜು ಅಧ್ಯಾಪಕರ ಸಂಘ ಕಾರ್ಯದರ್ಶಿ ಡಾ.ಆರ್.ಗಂಗಾಧರ, ಇತಿಹಾಸ ವಿಭಾಗದ ಮುಖ್ಯಸ್ಥ ಡಾ.ಆರ್.ಶಿವಪ್ಪ, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಗಿರೀಶ್ ನಾಯಕ, ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಶ್ಯಾಮ್ ರಾಜ್, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ.ಲೀಲಾವತಿ ಭಾಗವಹಿಸುವರು. ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪುಸ್ತಕ ಬಹುಮಾನ ಹಾಗೂ ಪ್ರಮಾಣ ಪತ್ರ ವಿತರಿಸಲಾಗುವುದು.

### 1 ರಂದು ಮಡಿವಾಳ ಮಾಚಿದೇವ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಫೆ.1ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಡಿವಾಳ ಮಾಚಿದೇವ ಜಯಂತಿ ಆಚರಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ. ಗೋಪಾಲಕೃಷ್ಣ, ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ, ಜಿಲ್ಲಾ ಮಡಿವಾಳರ ಸಂಘದ ಅಧ್ಯಕ್ಷ ಬಿ.ರಾಮಪ್ಪ, ಕಾರ್ಯದರ್ಶಿ ಕೆ.ಆರ್.ಮಂಜುನಾಥ್, ಮಡಿವಾಳ ಮಾಚಿದೇವರ ದೇವಸ್ಥಾನ ಅಭಿವೃದ್ಧಿ ಸಮಿತಿ ಗೌರವ ಅಧ್ಯಕ್ಷ ಶಿವಲಿಂಗಪ್ಪ, ಅಧ್ಯಕ್ಷ ಟಿ.ರುದ್ರೇಶ್ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು, ನಗರಸಭಾ ಸದಸ್ಯರು ಹಾಗೂ ಮಡಿವಾಳ ಸಮಾಜದ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು. ಇತಿಹಾಸ ಸಂಶೋಧಕ ಹಾಗೂ ಪ್ರಾಧ್ಯಾಪಕ ಡಾ.ಎನ್.ಎಸ್. ಮಹಂತೇಶ್ ಉಪನ್ಯಾಸ ನೀಡುವರು.

# ಒಳ ಮೀಸಲು ಜಾರಿಗಾಗಿ ಒತ್ತಾಯಿಸಿ ಡಿಸಿ ಕಚೇರಿ ಎದುರು ಮಾದಿಗ ಸಮುದಾಯ ಒಕ್ಕೂಟ ಪ್ರತಿಭಟನೆ

» ಚಿತ್ರದುರ್ಗ

ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಮಾದಿಗ ಸಮುದಾಯಗಳ ಸ್ವಾಭಿಮಾನದ ಒಕ್ಕೂಟದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಬುಧವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ಪ್ರತಿಭಟನಾಕಾರರು ಒಳ ಮೀಸಲಾತಿಯನ್ನು ಜಾರಿಗೊಳಿಸುವಲ್ಲಿ ವಿಳಂಭ ನೀತಿ ಅನುಸರಿಸುತ್ತಿರುವ ರಾಜ್ಯ ಸರ್ಕಾರದ ವಿರುದ್ದ ಧಿಕ್ಕಾರಗಳನ್ನು ಕೂಗಿದರು.




ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಕೆಂಗುಂಟೆ ಜಯಪ್ಪ ಒಳ ಮೀಸಲಾತಿ ಜಾರಿಗಾಗಿ ಮೂರು ನಾಲ್ಕು ದಶಕಗಳಿಂದ ಮಾದಿಗ ಸಮುದಾಯಗಳು ನಡೆಸಿದ ಹೋರಾಟದ ಫಲವಾಗಿ ಕಳೆದ ಆ.1 ರಂದು ಸುಪ್ರಿಂಕೋರ್ಟ್ ಒಳ ಮೀಸಲಾತಿಯನ್ನು ಜಾರಿಗೊಳಿಸುವ ಅಧಿಕಾರ ಆಯಾ ರಾಜ್ಯ ಸರ್ಕಾರಗಳಿಗಿದೆ ಎನ್ನುವ ಮಹತ್ತರ ತೀರ್ಪು ನೀಡಿದ್ದರೂ ಸಹ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ದತ್ತಾಂಶಗಳ ನೆಪ ಹೇಳಿಕೊಂಡು ಕಾಲಹರಣ ಮಾಡುತ್ತಿದ್ದಾರೆ. ನಾಗಮೋಹನ್‌ದಾಸ್ ವರದಿಗೆ ಕಾಯುವ ಬದಲು ಸುಪ್ರೀಂಕೋರ್ಟ್ ತೀರ್ಪಿನಂತೆ ಒಳ ಮೀಸಲಾತಿಯನ್ನು ಜಾರಿಗೊಳಿಸದಿದ್ದರೆ ಮುಂದಿನ ದಿನಗಳಲ್ಲಿ ಘೇರಾವ್ ಹಾಕಲಾಗುವುದೆಂದು ಎಚ್ಚರಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಒಳ ಮೀಸಲಾತಿಯನ್ನು ಜಾರಿಗೆ ತರುತ್ತಾರೆಂಬ ನಂಬಿಕೆಯಲ್ಲಿದ್ದೆವು. ಕಾಂಗ್ರೆಸ್ ಸರ್ಕಾರ ಮಾದಿಗರ ಪರವಾಗಿಲ್ಲ. ರಾಜಕಾರಣಿಗಳ ನಿಜ ಬಣ್ಣ ಈಗ ಬಯಲಾಗುತ್ತಿದೆ. ಇನ್ನು ನಾವುಗಳು ಭರವಸೆಯಿಟ್ಟುಕೊಂಡು ಸುಮ್ಮನೆ ಕುಳಿತುಕೊಳ್ಳುವುದರಲ್ಲಿ ಅರ್ಥವಿಲ್ಲ. ಉಗ್ರ ಹೋರಾಟಕ್ಕೆ ಸಜ್ಜಾಗಿದ್ದೇವೆಂದರು.

ವಿಧಾನಸಭೆ ಚುನಾವಣಾ ಪೂರ್ವದಲ್ಲಿ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಒಳ ಮೀಸಲಾತಿಯನ್ನು ಜಾರಿಗೆ ತರಬೇಕು. ಇಲ್ಲಿಯವರೆಗೂ ಆಳಿದ ಎಲ್ಲಾ ಸರ್ಕಾರಗಳು ಮಾದಿಗ ಸಮುದಾಯವನ್ನು ವಂಚಿಸಿಕೊಂಡು ಬರುತ್ತಿವೆ. ತಕ್ಷಣವೆ ರಾಜ್ಯ ಸರ್ಕಾರ ಒಳ ಮೀಸಲಾತಿಯನ್ನು ಅನುಷ್ಟಾನಕ್ಕೆ ತರಬೇಕು. ಇಲ್ಲದಿದ್ದರೆ ಕುರ್ಚಿ ಖಾಲಿ ಮಾಡುವತನಕ ನಮ್ಮ ಹೋರಾಟ ನಿಲ್ಲುವುದಿಲ್ಲ. ಮುಂದೆ ಮುಖ್ಯಮಂತ್ರಿ ಮನೆಗೆ ಮುತ್ತಿಗೆ ಹಾಕಲು ಎಲ್ಲಾ ಮಾದಿಗ ಸಮುದಾಯದ ಸಂಘಟನೆಗಲು ಸಿದ್ದವಾಗಿವೆ ಎಂದರು.ಮಾದಿಗ ಸಮುದಾಯಗಳ ಸ್ವಾಭಿಮಾನದ ಒಕ್ಕೂಟ ರಾಜ್ಯ ಕಾರ್ಯದರ್ಶಿ ಶಿವಮೂರ್ತಿ ಭೀಮನಕೆರೆ ಮಾತನಾಡುತ್ತ ಪರಿಶಿಷ್ಟ ಜಾತಿಯಲ್ಲಿನ 101 ಉಪ ಜಾತಿಗಳಿಗೆ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಕಿವಿಗೆ ಹೂವು ಮುಡಿಸುವ ಕೆಲಸ ಮಾಡುವುದನ್ನು ಬಿಟ್ಟು ತಕ್ಷಣದಿಂದಲೆ ಒಳ ಮೀಸಲಾತಿಯನ್ನು ಜಾರಿಗೆ ತರಬೇಕು. ಅವೈಜ್ಞಾನಿಕ ಆಯೋಗ ರಚಿಸಿರುವುದರಿಂದ ಮಾದಿಗ ಸಮುದಾಯಗಳಿಗೆ ಯಾವುದೇ ಪ್ರಯೋಜನವಿಲ್ಲ. ಮೂರು ತಿಂಗಳೊಳಗೆ ಒಳ ಮೀಸಲಾತಿಯನ್ನು ಜಾರಿಗೆ ತರದಿದ್ದರೆ ಮುಖ್ಯಮಂತ್ರಿ ನಿವಾಸಕ್ಕೆ ಮುತ್ತಿಗೆ ಹಾಕುವುದಾಗಿ ಗಡುವು ನೀಡಿದರು.

ಒಳ ಮೀಸಲಾತಿ ಜಾರಿಯಾಗುವತನಕ 37 ಸಾವಿರ ಸರ್ಕಾರಿ ಹುದ್ದೆಗಳ ನೇಮಕಾತಿಯನ್ನು ತಡೆಹಿಡಿಯಬೇಕು. 49 ಅಲೆಮಾರಿಗಳನ್ನು ಪ್ರತ್ಯೇಕವಾಗಿ ಗುರುತಿಸಿ ಶೇ.1 ಕ್ಕಿಂತ ಹೆಚ್ಚು ಒಳ ಮೀಸಲಾತಿಯನ್ನು ನೀಡಿ ಪ್ರತ್ಯೇಕ ಅಭಿವೃದ್ದಿ ನಿಗಮ ಸ್ಥಾಪಿಸಬೇಕು. ಎಸ್ಸಿ.ಪಿ. ಟಿ.ಎಸ್ಪಿ. ಅನುದಾನದಲ್ಲಿ ಮಾದಿಗ, ಸಮಗಾರ, ಡೋಹರ, ಮಚಗಾರ

ಜಾತಿಗಳ ಜನಸಂಖ್ಯೆಯ ಆಧಾರದ ಮೇಲೆ ಪ್ರತ್ಯೇಕ ಅನುದಾನ ಮೀಸಲಿಟ್ಟು ವೆಚ್ಚ ಮಾಡುವಂತೆ ಸರ್ಕಾರವನ್ನು ಒತ್ತಾಯಿಸಿದರು.ಮಾದಿಗ ಸಮುದಾಯಗಳ ಸ್ವಾಭಿಮಾನ ಒಕ್ಕೂಟದ ರಾಜ್ಯ ಕಾರ್ಯದರ್ಶಿ ಸುಂದರೇಶ್, ಕೆ.ಎನ್.ದೊಡ್ಡೊಟ್ಟೆಪ್ಪ, ಲಕ್ಷ್ಮಮ್ಮ, ನವೀದ್, ಮಹಾಂತೇಶ್ ಕೂನಬೇವು ಕೆ.ಪಿ.ಶ್ರೀನಿವಾಸ್, ಜಿಲ್ಲಾಧ್ಯಕ್ಷ ಎನ್.ಪ್ರಕಾಶ್, ಮಹಾಲಿಂಗಪ್ಪ, ಹನುಮಂತರಾಜು, ಹೆಚ್. ಆರ್.ಶ್ರೀನಿವಾಸ್, ಹನುಮಂತರಾಯ, ಶಿವಮ್ಮ, ರಾಮಸ್ವಾಮಿ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಪೊಲೀಸ್ ಇಲಾಖೆಗೆ ಸಾರ್ವಜನಿಕರ ಸಹಕಾರ ಅತ್ಯಗತ್ಯ: ಉಮಾ ಪ್ರಶಾಂತ್

» ದಾವಣಗೆರೆ

ನಗರದ ಎಸ್.ಎಸ್.ಬಡಾವಣೆಯ ಎ ಬ್ಲಾಕಿನಲ್ಲಿ ಗಣರಾಜ್ಯೋತ್ಸವದಂದು ಎಸ್.ಎಸ್.ಬಡಾವಣೆ ಸ್ನೇಹಿತರ ಬಳಗದ ಸಂಘ ಉದ್ಘಾಟನಾ ಕಾರ್ಯಕ್ರಮ ನಡೆಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಉಮಾ ಪ್ರಶಾಂತ್ ಸಂಘವನ್ನು ಉದ್ಘಾಟಿಸಿ ಮಾತನಾಡಿ, ಲಕ್ಷಾಂತರ ಹಣ ಖರ್ಚು ಮಾಡಿ ಈ ಬಡಾವಣೆ ಯಲ್ಲಿ ಮನೆಗಳನ್ನು ಕಟ್ಟಿಸಿದ್ದೀರಿ. ಆದರೆ ತಮ್ಮ ಮನೆಗಳ ರಕ್ಷಣೆ ಗೆ ಮಹತ್ವ ಕೊಡುತ್ತಿಲ್ಲ. ಇದರಿಂದ ಕಳ್ಳಕಾಕರಿಗೆ ಅನುಕೂಲವಾಗುತ್ತಿದೆ. ಸ್ನೇಹಮಯಿ ಪೊಲೀಸ್ ಇಲಾಖೆಯ ಮೇಲೆ ಹೆಚ್ಚಿನ ಒತ್ತಡ ಬೀಳುತ್ತಿದೆ. ಪೊಲೀಸ್ ಇಲಾಖೆಯೊಂದಿಗೆ ಸಾರ್ವಜನಿಕರ ಸಹಕಾರ ಬಹಳ ಮುಖ್ಯ. ಇತ್ತೀಚಿನ ದಿನಗಳಲ್ಲಿ ಆದ್ದರಿಂದ ತಮ್ಮ ಮನೆಗಳಿಗೆ ಸಿಸಿ ಟಿವಿಗಳನ್ನು ಅಳವಡಿಸಿಕೊಂಡಲ್ಲಿ ನಮ್ಮ ಇಲಾಖೆಗೆ ಸಹಕಾರಿಯಾಗುತ್ತದೆ. ನಮ್ಮ ಬಗ್ಗೆ ನಾವೂ ಸಹಾ ಎಚ್ಚರ ವಹಿಸುವುದು ಅವಶ್ಯಕವಾಗಿರುತ್ತದೆ ಎಂದರು.

ದಾವಣಗೆರೆ ತಾಲೂಕು ತಹಸಿಲ್ದಾರ್ ಡಾ.ಎಂ.ಬಿ.ಅಶ್ವಥ್ ಮಾತನಾಡಿ, ದಾವಣಗೆರೆಯ ವಿವಿಧ ಬಡಾವಣೆ ಸೇರಿದಂತೆ ವಿದ್ಯಾನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಹೆಚ್ಚಿನ ಕಳ್ಳತನ ಸುಲಿಗೆ ಹೆಚ್ಚಾಗಿದ್ದು ಪೊಲೀಸ್ ಇಲಾಖೆಯ ಸೂಚನೆಗಳನ್ನು ಪ್ರತಿಯೊಬ್ಬರೂ ಸಹಾ ಪಾಲಿಸಲು ಕರೆ ನೀಡಿದರು.



ಸಂಘದ ಅಧ್ಯಕ್ಷರಾದ ಎಂ.ಆಂಜನೇಯುಲು ಮಾತನಾಡಿ, ಸಂಘದ ಪದಾಧಿಕಾರಿಗಳು, ಬಡಾವಣೆ ಸ್ನೇಹಿತ ಬಂಧುಗಳು ತನು, ಮನ, ಧನ ನೀಡಿ ಈ ಕಾರ್ಯಕ್ರಮಕ್ಕೆ ಸಂಪೂರ್ಣ ಸಹಕಾರ ನೀಡಿ, ಕಾರ್ಯಕ್ರಮ ಯಶಸ್ವಿಗೊಳಿಸಲು ಸಹಕಾರಿಯಾಗಿದ್ದಾರೆ. ಇದೇ ರೀತಿ ಎಲ್ಲರೂ ಸಹಕಾರ ನೀಡಿದರೆ ನಾವು ದೊಡ್ಡ ಸಾಧನೆಯನ್ನೂ ಮಾಡಬಹುದು ಎಂದು ತಿಳಿಸಿದರು.

ಸಂಘದ ಕಾರ್ಯದರ್ಶಿ ಎಂ.ಎಸ್.ದೇವರಾಜ ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘವು ನಾಗರೀಕರಿಗೆ ಸ್ವಚ್ಚತೆ, ಪರಿಸರ ರಕ್ಷಣೆ, ಮಹಿಳಾ ಮತ್ತು ಮಕ್ಕಳ ಕ್ಷೇಮಾಭಿವೃದ್ಧಿ ಕಾರ್ಯಕ್ರಮ ಸೇರಿದಂತೆ ಹಲವಾರು ಸಮಾಜಮುಖಿ ಕಾರ್ಯಗಳನ್ನು ಸ್ಥಳೀಯರ ಸಹಕಾರದಿಂದ ನಡೆಸಲಾಗುವುದು ಸಂಘದ ಸದುದ್ದೇಶ ಹೊಂದಿದೆ. ಬಡಾವಣೆ ಯ ಎಲ್ಲಾ ಸ್ನೇಹಿತರು ಸಂಘದ ಸದಸ್ಯರಾಗಲು ಕೋರಿಕೊಂಡರು.

ಈ ಸಂದರ್ಭದಲ್ಲಿ ಸಾಧಕರಾದ ಪರಿಸರ ಪ್ರೇಮಿ ಪ್ರಸೂತಿ, ಸ್ತ್ರೀರೋಗ ತಜ್ಞೆ ಡಾ.ಶಾಂತಾಭಟ್, ದಾವಣಗೆರೆ ಜಿಲ್ಲೆ ಕ್ಯಾನ್ಸರ್ ಅಭಿಯಾನದ ರಾಯಬಾರಿ ಆರ್.ಟಿ.ಅರುಣಕುಮಾರ್ ಗೆ ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಸಂಘದ ಶಿವನಳ್ಳಿ ರಮೇಶ,ಸಂಘಟನಾ ಕಾರ್ಯದರ್ಶಿ ಟಿ.ನಾಗರಾಜ ಸೇರಿದಂತೆ ಸಂಘದ ಪದಾಧಿಕಾರಿಗಳು, ಸದಸ್ಯರು, ಸ್ಥಳೀಯರು, ಇತರರು ಭಾಗವಹಿಸಿದ್ದರು.

## ಚಿಕ್ಕಮಧುರೆ ಪ್ರಾಥಮಿಕ ಕೃಷಿಪತ್ತಿನ ಸಹಕಾರಿ ಸಂಘ ನೂತನ ಅಧ್ಯಕ್ಷರಾಗಿ ಆರ್.ಮುಕುಂದ



» ಚಳ್ಳಕೆರೆ

ತಾಲ್ಲೂಕಿನ ಚಿಕ್ಕಮಧುರೆಯ ಪ್ರಾಥಮಿಕ ಕೃಷಿಪತ್ತಿನ ಸಹಕಾರಿ ಸಂಘ ನಿಯಮಿತದ 2025-2030ಸಾಲಿನ ನೂತನ ನಿರ್ದೇಶಕರ ಆಯ್ಕೆ ನಡೆದು ನಂತರ ಆಯ್ಕೆಯಾದ ಎಲ್ಲಾ ನಿರ್ದೇಶಕರ ಸಮಕ್ಷಮದಲ್ಲಿ ಸಂಘದ ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ಹಿರಿಯ ಸಹಕಾರಿ ದುರೀಣ, ಸಹಕಾರ ರತ್ನ ಆರ್.ಮಲ್ಲೇಶಪ್ಪ, ಕರ್ನಾಟಕ ರಾಜ್ಯ ಖಾದಿಯೇತರ ಉಣ್ಣೆಕೈಮಗ್ಗ ನೇಕಾರರ ಸಂಘದ ರಾಜ್ಯಾಧ್ಯಕ್ಷ ಬಿ.ಮಲ್ಲಿಕಾರ್ಜುನಪ್ಪ ಮಾರ್ಗದರ್ಶನದಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎನ್.ಸಿ.ನೀಲಪ್ಪ ನೂತನ ಪದಾಧಿಕಾರಿಗಳ ಪಟ್ಟಿಯನ್ನು ಪ್ರಟಿಸಿದರು.

ಸಹಕಾರಿ ನೂತನ ಅಧ್ಯಕ್ಷರಾಗಿ ಆರ್.ಮುಕುಂದ, ಉಪಾಧ್ಯಕ್ಷರಾಗಿ ಬಿ.ಶಿವಣ್ಣ, ನಿರ್ದೇಶಕರಾಗಿ ಬಿ.ಮಲ್ಲಿಕಾರ್ಜುನಪ್ಪ, ಯು.ಸಿದ್ದೇಶ್, ಟಿ.ನಿಜಲಿಂಗಪ್ಪ, ಎಚ್.ಆಂಜನೇಯ, ಟಿ.ನಾಗಭೂಷಣ್, ಸಿ.ಎಲ್.ಸುರೇಶ್, ಪ್ರಸನ್ನಕುಮಾರ್, ಡಿ.ಎಸ್.ಸುಧಾಮಣಿ, ಜಯಮ್ಮ, ಎಚ್.ಸಿ.ತಿಪ್ಪೇಸ್ವಾಮಿ, ನಾಮನಿರ್ದೇಶನ ಸದಸ್ಯರಾಗಿ ಸಿಡಿಸಿಸಿ ಬ್ಯಾಂಕ್ ಮೇಲ್ವಿಚಾರಕರು ಆಯ್ಕೆಯಾಗಿರುತ್ತಾರೆ.



**ದಾವಣಗೆರೆ ಕುವೆಂಪು ವಿವಿಯಲ್ಲಿ ಪಿಎಚ್ ಡಿ ಪದವಿಯನ್ನು ಸ್ವೀಕರಿಸಿದ ದಾವಣಗೆರೆ ದೊಡ್ಡಪೇಟೆಯ ವಿರಕ್ತಮಠದ ಶ್ರೀ ಬಸವ ಪ್ರಭು ಸ್ವಾಮೀಜೀ ಅವರಿಗೆ ಜಯದೇವ ಮಠದಲ್ಲಿ ಯುವ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಿಟ್ಟುವಳ್ಳಿ ಪ್ರವೀಣ್ ಮತ್ತು ಸಂಗಡಿಗರು ಗೌರವರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ಆನಗೋಡ್ ನಾಗರಾಜ್, ಎಂ.ಕೆ. ಸ್ವಾಮಿ ಹಾಗೂ ಅರ್ಜುನ್ ಭಾಗವಹಿಸಿದ್ದರು.**

## ಶಿವಮೊಗ್ಗ: ಇಂದಿನಿಂದ ನಟನಂ ನೃತ್ಯೋತ್ಸವ

**ಶಿವಮೊಗ್ಗ:** ರಾಷ್ಟ್ರಮಟ್ಟದ ಹಿರಿಮೆಗಳಿಸಿರುವ ಶಿವಮೊಗ್ಗ ರಾಜೇಂದ್ರನಗರದ ನಟನಂ ಬಾಲನಾಟ್ಯ ಕೇಂದ್ರದಿಂದ ಎರಡು ದಿನಗಳ ಕಾಲ 224 ವಿದ್ಯಾರ್ಥಿ ಕಲಾವಿದರ ಭರ್ಜರಿ ನೃತ್ಯೋತ್ಸವ ನೃತ್ಯ ಕಾರ್ಯಕ್ರಮ ನಡೆಯಲಿದೆ ಎಂದು ಕರ್ನಾಟಕ ಕಲಾಶ್ರೀ ಗುರು ವಿದ್ವಾನ್ ಡಾ.ಎಸ್.ಕೇಶವಕುಮಾರ್ ಪಿಳ್ಳೆ ಅವರು ತಿಳಿಸಿದ್ದಾರೆ. ನಟನಂ ಬಾಲನಾಟ್ಯ ಕೇಂದ್ರದಿಂದ ಜನವರಿ 30ರ ನಾಳೆ ಹಾಗೂ 31ರಂದು ಶಿವಮೊಗ್ಗ ಕುವೆಂಪುರಂಗಮಂದಿರಲ್ಲಿ ಪ್ರತಿದಿನ ಸಂಜೆ 5.30ಕ್ಕೆ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಇದರಲ್ಲಿ ಅತ್ಯಂತ ವಿಜೃಂಭಣೆಯಿಂದ ಭಾರತದ ಮುಖ್ಯ ಶಾಸ್ತ್ರೀಯ ನೃತ್ಯ ಪ್ರಕಾರಗಳಾದ ಭರತನಾಟ್ಯ ಹಾಗೂ ಕರ್ನಾಟಕ ಜಾನಪದ ನೃತ್ಯ, ಪಂಜಾಬಿನ ಭಾಂಗ್ಡಾ ನೃತ್ಯ, ರಾಜಸ್ಥಾನದ ಕಾಲ್ ಬೇಲಿಯಾ ಪ್ಯೂಜನ್ ಮತ್ತು ಪ್ಯೂಷನ್ ನೃತ್ಯಗಳಿಗೆ 224 ಕಲಾವಿದರು ಅಭಿನಯಿಸಲಿದ್ದಾರೆ. ಈ ಕಾರ್ಯಕ್ರಮವನ್ನು ಎಸ್.ಕೇಶವಕುಮಾರ್ ಪಿಳ್ಳೆ ಪ್ರಸ್ತುತಪಡಿಸಿದ್ದು, ಅವರೊಂದಿಗೆ ವಿದ್ವಾನ್ ಎಸ್‌ಸಿ ಚೇತನ್, ವಿದುಶ್ರೀ ನಾಟ್ಯಶ್ರೀ ಕೆ ಸೆಲ್ವಂ, ನಟನಂ ಕೇಂದ್ರದ ನೃತ್ಯ ಶಿಕ್ಷಕರು ಭಾಗವಹಿಸಲಿದ್ದಾರೆ.

## ಪ್ರಮುಖ ಸುದ್ದಿ

# ಹಿರಿಯ ನಾಗರೀಕರಿಗೆ ಆಯುಷ್ಮಾನ್ ಕಾರ್ಡ್ ವಿತರಣೆ

» ಚಿತ್ರದುರ್ಗ

ಹಿರಿಯ ನಾಗರೀಕರು, ವಿಕಲಚೇತನರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ತಲುಪಿಸುವಲ್ಲಿ ಬಸವೇಶ್ವರ ವಿದ್ಯಾಸಂಸ್ಥೆ ನಿಸ್ವಾರ್ಥ ಸೇವೆ ಸಲ್ಲಿಸುತ್ತಿದೆ ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ವೀರೇಶ್ ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ, ಸಬಲೀಕರಣ ಇಲಾಖೆ, ಬಸವೇಶ್ವರ ವಿದ್ಯಾಸಂಸ್ಥೆ ಸಂಯುಕ್ತಾಶ್ರಯದಲ್ಲಿ ಹೊಂಬೆಳಕು ಹಿರಿಯ ನಾಗರೀಕರ ಸಹಾಯವಾಣಿ ಕೇಂದ್ರದಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ ಹಿರಿಯ ನಾಗರೀಕರಿಗೆ ಆಯುಷ್ಮಾನ್ ವಯೋ ವಂದನ ಕಾರ್ಡ್ ವಿತರಣಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ವಯಸ್ಸಾದ ಮೇಲೆ ಹಿರಿಯರು ಒಂದಲ್ಲ ಒಂದು ರೀತಿಯ ಕಷ್ಟಗಳನ್ನು ಅನುಭವಿಸುತ್ತಿರುತ್ತಾರೆ.



ಸರ್ಕಾರಿ ನೌಕರಿಯಿಂದ ನಿವೃತ್ತಿಯಾಗಿ ಪಿಂಚಣಿ ಪಡೆಯುತ್ತಿರುವವರು

ನೆಮ್ಮದಿಯಾಗಿ ಬದುಕಬಹುದು. ಆದರೆ ಯಾವುದೇ ರೀತಿಯ ಸವಲತ್ತುಗಳಿಲ್ಲದೆ ಬದುಕುವುದು ಕಷ್ಟದ ಕೆಲಸ. ಇಂತಹ ಪರಿಸ್ಥಿತಿಯಲ್ಲಿ ಬಸವೇಶ್ವರ ವಿದ್ಯಾಸಂಸ್ಥೆ, ಹಿರಿಯ ನಾಗರೀಕರು ಹಾಗೂ ವಿಕಲಚೇತನರ ಪರವಾಗಿ ಕೆಲಸ ಮಾಡುತ್ತಿರುವುದು ನಿಜಕ್ಕೂ ಮೆಚ್ಚುವಂತದ್ದು ಎಂದು ಗುಣಗಾನ ಮಾಡಿದರು.

ಸಮಾಜ ಸೇವಕರಾದ ಎಸ್.ಷಣ್ಮುಖಪ್ಪ ಮಾತನಾಡುತ್ತ ಹಿರಿಯ ನಾಗರೀಕರು ಹಾಗೂ ವಿಕಲಚೇತನರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಸಿಗುವ ಸೌಲತ್ತುಗಳು ತಲುಪಬೇಕು. ಈ ನಿಟ್ಟಿನಲ್ಲಿ ಬಸವೇಶ್ವರ ವಿದ್ಯಾಸಂಸ್ಥೆ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದೆ ಎಂದು ಶ್ಲಾಘಿಸಿದರು.

ನಿವೃತ್ತ ಪ್ರಾಚಾರ್ಯರಾದ ಕೋರಧಾನ್ಯ ಮಠದ ಗುರುಬಸವಯ್ಯ ಮಾತನಾಡಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಾಕಷ್ಟು ಯೋಜನೆಗಳಿವೆ. ಆದರೆ ಬಹಳಷ್ಟು ಜನರಿಗೆ ಗೊತ್ತಿರುವುದಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಬಸವೇಶ್ವರ ವಿದ್ಯಾಸಂಸ್ಥೆಯ ವಿ.ಕೆ.ಶಂಕರಪ್ಪ ಗುರುತಿನ ಚೀಟಿಗಳನ್ನು ವಿತರಿಸುತ್ತಿರುವುದು ಪುಣ್ಯದ ಕೆಲಸ ಎಂದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಬಸವೇಶ್ವರ ವಿದ್ಯಾಸಂಸ್ಥೆ ಅಧ್ಯಕ್ಷೆ ಪ್ರಭಾವತಿ ಶಂಕರಪ್ಪ ಮಾತನಾಡುತ್ತ ಹಿರಿಯರನ್ನು ಗೌರವದಿಂದ ನಡೆಸಿಕೊಳ್ಳುವವರ ಸಂಖ್ಯೆ ಕಡಿಮೆಯಾಗುತ್ತಿದೆ. ವಯಸ್ಸಾದ ತಂದೆ-ತಾಯಿಗಳ ಪೋಷಿಸದ ಮಕ್ಕಳು ಕೊನೆಗಾಲದಲ್ಲಿ ವೃದ್ಧಾಶ್ರಮಕ್ಕೆ ಸಾಗಿಸಿ ಜವಾಬ್ದಾರಿಯಿಂದ ನುಣುಚಿಕೊಳ್ಳುವುದನ್ನು ನೋಡಿದ್ದೇವೆ. ಸಣ್ಣ ಸಣ್ಣ ವಿಚಾರಗಳಿಗೂ ಎಲ್ಲರ ಮನೆಯಲ್ಲಿಯೂ ಜಗಳವಾಗುವುದು ಸಹಜ. ಹಾಗಂತ ಹಿರಿಯರನ್ನು ದೂಷಿಸುವುದು ಸರಿಯಲ್ಲ ಎಂದರು. ಚಾರ್ಟೆಡ್ ಅಕೌಂಟೆಂಟ್ ಈ.ಚಂದ್ರಣ್ಣ ಮಾತನಾಡಿದರು.

## ಫಾಸ್ಟ್ ನ್ಯೂಸ್

### ಅನಾಮದೇಯ ಶವ ಪತ್ತೆ : ಗುರುತಿಗೆ ಮನವಿ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕಿನ ಚಿಕ್ಕಜಾಜೂರು ಗ್ರಾಮದ ಎಸ್‌ಜೆಎಂ ಪಿಯು ಕಾಲೇಜು ಮುಂಭಾಗದಲ್ಲಿರುವ ಅಡಿಕೆ ಮರದ ಚಪ್ಪರದ ಮೇಲ್ಭಾವಣಿಗೆ ಅಡ್ಡಲಾಗಿ ಹಾಕಿರುವ ಅಡಿಕೆ ಬೊಂಬಿಗೆ ತೆಂಗಿನ ನಾರಿನ ಹಗ್ಗವನ್ನು ಕಟ್ಟಿಕೊಂಡು ಸುಮಾರು 25-30 ವರ್ಷದ ಅನಾಮಧೇಯ ವ್ಯಕ್ತಿ ಶವ ಪತ್ತೆಯಾದ ಕುರಿತು ಜ.22ರಂದು ಚಿಕ್ಕಜಾಜೂರು ಪೊಲೀಸ್ ಠಾಣೆಯಲ್ಲಿಪ್ರಕರಣದಾಖಲಾಗಿದೆ.ಅನಾಮಧೇಯ ವ್ಯಕ್ತಿಯು 5.9 ಅಡಿ ಎತ್ತರ, ದೃಢವಾದ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ಅಗಲವಾದ ಮುಖ, ಎದೆಯ ಎಡಭಾಗದಲ್ಲಿ ಹಾಗೂ ನಾಭಿಯ ಮೇಲ್ಭಾಗದಲ್ಲಿ ಕಪ್ಪು ಮಚ್ಚೆ ಇರುತ್ತದೆ. ಸುಮಾರು 03 ಇಂಚು ಉದ್ದದ ಕಪ್ಪು ಕೂದಲುಗಳು ಇರುತ್ತವೆ. ಮೃತ ದೇಹದ ಮೈ ಮೇಲೆ ತಿಳಿ ಹಸಿರು ಬಣ್ಣದ ಟೀಶರ್ಟ್, ಸಿಮೆಂಟ್‌ಕಲರ್ ನೈಟ್ ಪ್ಯಾಂಟ್, ನೀಲಿ ಬಣ್ಣದ ಡ್ರಾಯರ್ ಇರುತ್ತದೆ. ಮೃತ ಅನಾಮಧೇಯ ವ್ಯಕ್ತಿಯ ಕುರಿತು ಮಾಹಿತಿ ತಿಳಿದುಬಂದಲ್ಲಿ ಚಿಕ್ಕಜಾಜೂರು ಪೊಲೀಸ್ ಠಾಣೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಕಲಾ ಮಳಾವ್ ಕಾರ್ಯಕ್ರಮದಲ್ಲಿ ಭಾಗವಹಿಸುವ ಬಂಜಾರ ಕಲಾವಿದರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜನವರಿ 30 ಕೊನೆಯ ದಿನವಾಗಿರುತ್ತದೆ. ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ವಿ.ಎಸ್.ಅಲಗೂರ ಅರ್ಕೇಡ್ , 2ನೇ ಮಹಡಿ, ಹದಡಿ ರಸ್ತೆ ದಾವಣಗೆರೆ ಕಚೇರಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ: 9886791289, 9916013624 ಸಂಪರ್ಕಿಸಿ.

### ದೇವದಾಸಿ ಸಮರ್ಪಣೆ ನಿಷೇಧ

» ದಾವಣಗೆರೆ

ಜನವರಿ 30 ರಂದು ಬೆಳಿಗ್ಗೆ 11 ಗಂಟೆಗೆ ಹರಿಹರದ ಬಸ್ ನಿಲ್ದಾಣದ ಹತ್ತಿರವಿರುವ ಗುರುಭವನದಲ್ಲಿ ದೇವದಾಸಿ ಸಮರ್ಪಣೆ ನಿಷೇಧ ಕುರಿತು ಮಾಜಿ ದೇವದಾಸಿ ಮಹಿಳೆಯರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ ತಿಳಿಸಿದ್ದಾರೆ.

### ೩೦ರಂದು ಜಾಗೃತಿ ಜಾಥಾಕ್ಕೆ ಚಾಲನೆ

» ಚಿತ್ರದುರ್ಗ

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನ ಕಾರ್ಯಕ್ರಮದಡಿಯಲ್ಲಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನವನ್ನು ಇದೇ ಜ.31 ರಿಂದ ಫೆ.13 ರವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಜಾಗೃತಿ ಮೂಡಿಸುವ ಸಲುವಾಗಿ ಜಾಥಾ ಕಾರ್ಯಕ್ರಮವನ್ನು ಇದೇ ಜ.30ರಂದು ಬೆಳಿಗ್ಗೆ 9.30ಕ್ಕೆ ನಗರದ ಜಿಲ್ಲಾ ಆಸ್ಪತ್ರೆ ಆವರಣದಿಂದ ಪ್ರಾರಂಭವಾಗಿ ಡೆಂಟಲ್ ಕಾಲೇಜುವರೆಗೆ ಹೋಗಿ ಮದಕರಿ ವೃತ್ತದಲ್ಲಿ ಕೊನೆಗೊಳ್ಳಲಿದೆ.

### ಬೆಂಬಲ ಬೆಲೆಯಡಿ ಕಡಲೆಕಾಳು ಖರೀದಿ; ನೊಂದಣಿ ಪ್ರಾರಂಭ

» ದಾವಣಗೆರೆ

ಹಿಂಗಾರು ಹಂಗಾಮಿನಲ್ಲಿ ಬೆಳೆದ ಕಡಲೆಕಾಳು ಉತ್ಪನ್ನವನ್ನು ರೈತರಿಂದ ನೇರವಾಗಿ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಲು ಸರ್ಕಾರ ಆದೇಶಿಸಿದ್ದು ಖರೀದಿಗೆ ನೊಂದಣಿಯನ್ನು ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ. ಅವರು ಇತ್ತೀಚೆಗೆ ನಡೆದ ಬೆಂಬಲ ಬೆಲೆಯಡಿ ಕಡಲೆಕಾಳು ಖರೀದಿಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಏರ್ಪಡಿಸಿದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಉತ್ತಮ ಗುಣಮಟ್ಟದ ಕಡಲೆಕಾಳಿಗೆ ಸರ್ಕಾರ ಪ್ರತಿ ಕ್ವಿಂಟಾಲ್‌ಗೆ 5650 ರೂ. ನಿಗದಿಪಡಿಸಿದೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಕಡಲೆಕಾಳಿನ ಬೆಲೆ ಕುಸಿದಿದ್ದು, ರೈತರು ನಷ್ಟಕ್ಕೆ ಒಳಗಾಗುತ್ತಿದ್ದಾರೆ. ಹೀಗಾಗಿ ರೈತರ ಹಿತಕಾಯಲು ಸರ್ಕಾರದ ವತಿಯಿಂದ ಜಿಲ್ಲೆಯಲ್ಲಿ ಕೂಡಲೆ ಬೆಂಬಲ ಬೆಲೆಯಲ್ಲಿ ಕಡಲೆಕಾಳು ಖರೀದಿಗೆ ಜಗಳೂರು ಮತ್ತು ಚನ್ನಗಿರಿ ಎಪಿಎಂಸಿ ಆವರಣದಲ್ಲಿ ರೈತರ ನೊಂದಣಿ ಕಾರ್ಯ ಪ್ರಾರಂಭಿಸಬೇಕು. ನೊಂದಣಿಗೂ ಮುನ್ನ ರೈತರು ಫ್ರೂಟ್ಸ್ ತಂತ್ರಾಂಶದಲ್ಲಿ ನೊಂದಣಿ ಮಾಡಿರಬೇಕು. ಖರೀದಿ ಕೇಂದ್ರಕ್ಕೆ ಅವಶ್ಯಕವಿರುವ ಸಿಬ್ಬಂದಿಯನ್ನು ನೇಮಕಾತಿ ಮಾಡಿಕೊಳ್ಳಬೇಕು ಹಾಗೂ ಖರೀದಿಗೆ ಸಂಬಂಧಿಸಿದಂತೆ ಎಲ್ಲಾ ಅಗತ್ಯ ಪೂರ್ವ ಸಿದ್ಧತೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಎಫ್‌ಎಕ್ಯೂ ಗುಣಮಟ್ಟದ ಕಡಲೆಕಾಳಿಗೆ ಪ್ರತಿ ಕ್ವಿಂಟಾಲ್ ರೂ. 5650 ರೂ. ಬೆಂಬಲ ಬೆಲೆ ನಿಗದಿಪಡಿಸಿದ್ದು, ನಾಫೆಡ್ ಸಂಸ್ಥೆಯನ್ನು ಕೇಂದ್ರದ ಖರೀದಿ ಏಜೆನ್ಸಿಯಾಗಿ ಹಾಗೂ ಕರ್ನಾಟಕ ಸಹಕಾರ ಮಾರಾಟ ಮಹಾ ಮಂಡಳಿ ರಾಜ್ಯದ ವತಿಯಿಂದ ಖರೀದಿ ಏಜೆನ್ಸಿಯಾಗಿದೆ. ಜ.27 ರಿಂದ 80 ದಿನಗಳ ಕಾಲ ರೈತರಿಂದ ನೊಂದಣಿ ಕಾರ್ಯ ನಡೆಯಲಿದ್ದು, ಖರೀದಿಯೂ ಕೂಡ 90 ದಿನಗಳ ಕಾಲ ನಡೆಯಲಿದೆ. ಪ್ರತಿ ಎಕರೆಗೆ 4 ಕ್ವಿಂಟಾಲ್, ಪ್ರತಿ ರೈತರಿಂದ ಗರಿಷ್ಠ 20 ಕ್ವಿಂ. ಕಡಲೆಕಾಳು ಖರೀದಿಗೆ ಮಿತಿ ನಿಗದಿಪಡಿಸಲಾಗಿದೆ.

# ಹೊಸದುರ್ಗ ತಾಲ್ಲೂಕು ಹಾಲು ಉತ್ಪಾದನೆಯಲ್ಲಿ ಉತ್ತಮ ಗುಣಮಟ್ಟ ಹೊಂದಿದೆ: ರವಿಕುಮಾರ್

» ಚಿತ್ರದುರ್ಗ

ಶಿವಮೊಗ್ಗ ಹಾಲು ಒಕ್ಕೂಟ ತುಂಬಾ ದೊಡ್ಡ ಮಟ್ಟದಲ್ಲಿ ಹೆಸರು ಇದೆ. ಹೊಸದುರ್ಗ ತಾಲ್ಲೂಕು ಹಾಲು ಉತ್ಪಾದನೆಯಲ್ಲಿ ಉತ್ತಮ ಗುಣಮಟ್ಟ ಹೊಂದಿದೆ ಎಂದು ಶಿವಮೊಗ್ಗ ಹಾಲು ಒಕ್ಕೂಟ ನಿರ್ದೇಶಕ ಬಿ.ಆರ್.ರವಿಕುಮಾರ್ ಹೇಳಿದರು.

ಹೊಸದುರ್ಗ ಪಟ್ಟಣದ ಎಪಿಎಂಸಿ ಮಾರುಕಟ್ಟೆಯ ರೈತಭವನದಲ್ಲಿ ಗುರುವಾರ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಜಿಲ್ಲಾ ಸಹಕಾರ ಯೂನಿಯನ್, ಸಹಕಾರ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಹೊಸದುರ್ಗ ತಾಲ್ಲೂಕಿನಲ್ಲಿ ಬರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದು.



ಸಹಕಾರ ಕ್ಷೇತ್ರದಲ್ಲಿ ಆಗುವಂತಹ ಬದಲಾವಣೆಗಳು ಕಾಯ್ದೆ, ಕಾನೂನುಗಳಲ್ಲಿ ಇತ್ತೀಚೆಗೆ ಆಗುವಂತಹ ತಿದ್ದುಪಡಿಗಳ ಕುರಿತು ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ತಿಳಿಸುವ ಉದ್ದೇಶದಿಂದ ತರಬೇತಿ ಹಮ್ಮಿಕೊಂಡಿದ್ದು, ತಾವುಗಳು ತರಬೇತಿಯ ಮಾರ್ಗದರ್ಶನ ಮತ್ತು ಸರಿಯಾದ ಮಾಹಿತಿ ಪಡೆಯಬೇಕು ಎಂದರು.

ಕೆ.ಎಂ.ಎಫ್ ಇಡೀ ದೇಶದಲ್ಲಿಯೇ ತುಂಬಾ ಅತ್ಯುತ್ತಮ ಹೆಸರು ಇದ್ದು, ಕೆ.ಎಂ.ಎಫ್ ಉತ್ಪನ್ನಗಳಿಗೆ ಬೇಡಿಕೆ ಜಾಸ್ತಿಯಾಗುತ್ತಿದೆ. ಇತ್ತೀಚೆಗೆ ನಿಮಗೆ ಗೊತ್ತಿರುವಂತೆ ತಿರುಪತಿ ಪ್ರಸಾದ ತಯಾರಿಸಲು ನಂದಿನ ತುಪ್ಪದ ಬೇಡಿಕೆ ಬಂದಿದ್ದು, ಈಗಾಗಲೇ ಸರಬರಾಜು ಆಗುತ್ತಿದೆ. ಇದಕ್ಕೆಲ್ಲ ನಿಮ್ಮಗಳ ಶ್ರಮದಿಂದ ಹಾಲಿನ ಗುಣಮಟ್ಟ ಹೆಚ್ಚುತ್ತಿರುವುದರಿಂದ ಎಂದು ತಿಳಿಸಿದ ಅವರು, ಹಾಲಿನ ದರ ರೂ.2 ಹೆಚ್ಚಿಸಲು ಒಕ್ಕೂಟದಿಂದ ತುರ್ತು ಸಭೆಯನ್ನು ನಡೆಸಿ, ಚರ್ಚಿಸಿ, ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

ಶಿಮುಲ್ ಉಪ ವ್ಯವಸ್ಥಾಪಕ ಮುಕುಂದ ನಾಯ್ಕ್ ಮಾತನಾಡಿ, ಹಾಲು ಉತ್ಪಾದಕ ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಹಾಲು ಶೇಖರಣೆ, ಅದರ ಉತ್ತಮಗುಣಮಟ್ಟ ಕಾಪಾಡಿಕೊಳ್ಳಬೇಕು ಮತ್ತು ಸಿಬ್ಬಂದಿ ಜವಾಬ್ದಾರಿ ಮತ್ತು ಕರ್ತವ್ಯಗಳ ಬಗ್ಗೆ ತಿಳಿಸಿದರು. ಸಿಬ್ಬಂದಿಗಳು ಶ್ರಮ ವಹಿಸಿ ಕರ್ತವ್ಯ ನಿರ್ವಹಿಸಬೇಕು ಕಾರ್ಯದರ್ಶಿಗಳ ಶ್ರಮ ಬಹಳ ಮುಖ್ಯ ಎಂದರು. ತರಬೇತಿ ಕಾರ್ಯಕ್ರಮದಲ್ಲಿ "ಲೆಕ್ಕಪತ್ರಗಳ ಆಡಳಿತಾತ್ಮಕ ನಿರ್ವಹಣೆ ಮತ್ತು ಲೆಕ್ಕಪರಿಶೋಧನೆಗೆ ಸಿದ್ಧತೆ" ಕುರಿತು ಶಿರಸಿಯ ಸನ್ನದು ಲೆಕ್ಕಪರಿಶೋಧಕ ಮಣಿಕಂಠ ನ್.ಟೆಕ್ಕೂರ್ ಉಪನ್ಯಾಸ ನೀಡಿದರು.

ಶುದ್ಧ ಹಾಲು ಉತ್ಪಾದನೆ ಹಾಗೂ ಗುಣಮಟ್ಟ ಕಾಪಾಡಿಕೊಳ್ಳುವ ಬಗ್ಗೆ ಶಿವಮೊಗ್ಗ ಹಾಲು ಒಕ್ಕೂಟಟ ವಿಸ್ತರಣಾಧಿಕಾರಿ ಕೆ.ಕೃಷ್ಣಪ್ಪ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಜಯಶ್ರೀ ಪಿ.ಹುನಗುಂದ, ಜಿಲ್ಲಾ ಸಹಕಾರ ಶಿಕ್ಷಕ ನಾಗರಾಜ ಪಾಟೀಲ್, ವ್ಯವಸ್ಥಾಪಕಿ ಸೌಮ್ಯ ಇದ್ದರು.

# ಸ್ವಾಮಿ ವಿವೇಕಾನಂದರ ಜಯಂತಿ ಆಚರಣೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಗುಡ್ಡದ ರಂಗವ್ವನಹಳ್ಳಿಯ ದಾವಣಗೆರೆ ವಿಶ್ವವಿದ್ಯಾನಿಲಯ ಜ್ಞಾನ ಗಂಗೋತ್ರಿ ಸ್ನಾತಕೋತ್ತರ ಕೇಂದ್ರದ ಸಭಾಂಗಣದಲ್ಲಿ ಈಚೆಗೆ ಸ್ವಾಮಿ ವಿವೇಕಾನಂದರ 162ನೇ ಜಯಂತಿ ಆಚರಿಸಲಾಯಿತು.

ದಾವಣಗೆರೆ ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಕೇಂದ್ರ ಜ್ಞಾನ ಗಂಗೋತ್ರಿ ರಾಷ್ಟ್ರೀಯ ಸೇವಾ ಯೋಜನೆ 1 ಮತ್ತು 2 ಘಟಕ, ಚಿತ್ರದುರ್ಗ ವೈದ್ಯಕೀಯ ಕಾಲೇಜು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಸ್ವಾಮಿ ವಿವೇಕಾನಂದರ 162ನೇ ಜಯಂತಿ ಕಾರ್ಯಕ್ರಮದಲ್ಲಿ ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ನಂತರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಸ್ನಾತಕೋತ್ತರ ಕೇಂದ್ರಕ್ಕೆ ಕ್ರೀಡಾ ಸಾಮಾಗ್ರಿಗಳನ್ನು ಪಡೆಯಲಾಯಿತು.

ದಾವಣಗೆರೆ ವಿಶ್ವವಿದ್ಯಾನಿಲಯ ಪ್ರಾಧ್ಯಾಪಕ ಡಾ.ಸ್ವಾಮಿ ಸ್ವಾಮಿ ವಿವೇಕಾನಂದರ ಕುರಿತು ಉಪನ್ಯಾಸ ನೀಡಿ, ಸ್ವಾಮಿ ವಿವೇಕಾನಂದರ



162ನೇ ಜಯಂತಿಯನ್ನು ಆಚರಿಸುತ್ತಿದ್ದೇವೆ. ವಿವೇಕಾನಂದರು ವಿಶ್ವದ ಯೂತ್ ಐಕಾನ್ ಆಗಿದ್ದು, ಅವರ ಚಿಂತನೆಗಳನ್ನು ಆಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಚಿತ್ರದುರ್ಗ ವೈದ್ಯಕೀಯ ಕಾಲೇಜು ನಿರ್ದೇಶಕ ಡಾ.ಯುವರಾಜ್ ಮಾತನಾಡಿ, ನಮ್ಮ ದೇಶದ ಶಕ್ತಿ ಯುವಕರು. ಇಂದಿನ ಯುವಕರಿಗೆ ವಿದ್ಯೆ ಕಲಿಸುವ ಬಗ್ಗೆ ಉತ್ತಮ ಮಾರ್ಗದರ್ಶಕರು ಸಿಗುತ್ತಿಲ್ಲ ಎಂದು ಹೇಳಿದರು.ಕಾರ್ಯಕ್ರಮದ ಅಂಗವಾಗಿ ನಡೆಸಲಾದ ಕ್ರೀಡೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣಾ ಕಾರ್ಯಕ್ರಮವನ್ನು ಎನ್‌ಎಸ್‌ಎಸ್ ಘಟಕ-1ರ ಕಾರ್ಯಕ್ರಮಾಧಿಕಾರಿ ಡಾ.ಎಂ.ಸುಂದರಂ ನಿರ್ವಹಿಸಿದರು. ಎನ್‌ಎಸ್‌ಎಸ್ ಘಟಕ-2ರ ಕಾರ್ಯಕ್ರಮಾಧಿಕಾರಿ ಬಿ.ಟಿ.ನಿವೇದಿತಾ ನಿರೂಪಿಸಿದರು.ಕಾರ್ಯಕ್ರಮದಲ್ಲಿ ಸ್ನಾತಕೋತ್ತರ ಕೇಂದ್ರದ ನಿರ್ದೇಶಕ ಡಾ.ಸತ್ಯನಾರಾಯಣ, ಸ್ನಾತಕೋತ್ತರಕೇಂದ್ರದ ಡಾ.ರಾಜೇಂದ್ರ ಪ್ರಸಾದ್, ಎಸ್, ಡಾ. ಭೀಮಾಶಂಕರ ಜೋಶಿ, ಡಾ.ರೂಪೇಶ್ ಕುಮಾರ್.ಆರ್, ಡಾ. ಮಂಜುನಾಥ್, ಡಾ. ಉಷಾ ಹಾಗೂ ಕಛೇರಿ ಅಧೀಕ್ಷಕರಾದ ಗಿರಿಜಮ್ಮ, ಅಧ್ಯಾಪಕ ಮತ್ತು ಅಧ್ಯಾಪಕೇತರ ಸಿಬ್ಬಂದಿ ಮತ್ತು ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪೋಕ್ಸೋ: ವೈದ್ಯಾಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ



» ಚಿತ್ರದುರ್ಗ

ಚಿತ್ರದುರ್ಗ ನಗರದ ಐಎಂಎ ಸಭಾಂಗಣದಲ್ಲಿ ಬುಧವಾರ ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳಿಗೆ ಲೈಂಗಿಕ ಅಪರಾಧಗಳ ವಿರುದ್ಧ ಮಕ್ಕಳ ರಕ್ಷಣಾ ಮಸೂದೆ (ಪೋಕ್ಸೋ) ಕುರಿತು ಮಾಹಿತಿ ಶಿಕ್ಷಣ ಸಂವಹನ ತರಬೇತಿ ಕಾರ್ಯಾಗಾರ ನಡೆಯಿತು.

ಜಿಲ್ಲಾ ತಾಯಿ ಮಕ್ಕಳ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ. ಡಿಎಂ ಅಭಿನವ ಮಾತನಾಡಿ, ಮಕ್ಕಳ ಮೇಲೆ ನಡೆಯುವ ಲೈಂಗಿಕ ದೌರ್ಜನ್ಯ ತಡೆಗಟ್ಟುವ ನಿಟ್ಟಿನಲ್ಲಿ ವೈದ್ಯಾಧಿಕಾರಿಗಳ ಜವಾಬ್ದಾರಿ ಪಾತ್ರ ಬಹಳ ಪ್ರಮುಖವಾಗಿರುತ್ತದೆ. ಪ್ರಕರಣಗಳನ್ನು ದಾಖಲಿಸುವುದು, ದಾಖಲಾತಿಗಳ ನಿರ್ವಹಣೆ, ಸಂಬಂಧಿಸಿದ ಇಲಾಖೆಗೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿಗಳಿಗೆ ಮಾಹಿತಿ ಒದಗಿಸುವುದು, ಅಪರಾಧಕ್ಕೆ ಒಳಗಾದ ಮಕ್ಕಳಿಗೆ ಸೂಕ್ತ ಚಿಕಿತ್ಸೆ ಒದಗಿಸುವುದರ ಬಗ್ಗೆ ತಿಳಿಸಿದರು.

ಜಿಲ್ಲಾ ಆರೋಗ್ಯ ಇಲಾಖೆಯ ಕಾನೂನು ಸಲಹೆಗಾರ ವಕೀಲ ಉಮೇಶ್ ಮಾತನಾಡಿ, ಮಕ್ಕಳ ವಿರುದ್ಧ ಲೈಂಗಿಕ ಅಪರಾಧಗಳಲ್ಲಿ ತೊಡಗಿರುವವರಿಗೆ ಕಠಿಣ ಶಿಕ್ಷೆ, ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಮರಣದಂಡನೆ, ದಂಡ ಮತ್ತು ಜೈಲು ಶಿಕ್ಷೆಯನ್ನು ವಿಧಿಸುವುದರ ಜೊತೆಗೆ ತಡೆಯಲು ಪ್ರಯತ್ನಿಸುತ್ತದೆ. ಮಕ್ಕಳ ಅಶ್ಲೀಲತೆ ಲೈಂಗಿಕ ದೌರ್ಜನ್ಯಗಳನ್ನು ತಡೆಗಟ್ಟುವಲ್ಲಿ ಇರುವ ಕಾನೂನಿನ ಕಾಯ್ದೆಗಳನ್ನ ಎಲ್ಲಾ ವೈದ್ಯಾಧಿಕಾರಿಗಳಿಗೂ ತಿಳಿಸಿ ಹೇಳಿದರು.

ಜಿಲ್ಲಾ ಆಸ್ಪತ್ರೆ ಸ್ತ್ರೀ ರೋಗ ತಜ್ಞೆ ಡಾ.ರೂಪಶ್ರೀ ಮಾತನಾಡಿ, ದೌರ್ಜನ್ಯಕ್ಕೆ ಒಳಗಾದ ಮಕ್ಕಳ ವೈದ್ಯಕೀಯ ಪರೀಕ್ಷೆ ನಡೆಸುವಲ್ಲಿ ಅನುಸರಿಸಬೇಕಾದ ನಿಯಮಗಳನ್ನು ಇಲಾಖೆಯ ಮಾರ್ಗದರ್ಶನದಂತೆ ಪರೀಕ್ಷಾ ವರದಿಗಳನ್ನು ಭರ್ತಿ ಮಾಡುವ ನಮೂನೆಗಳನ್ನು ವಿವರಿಸಿದರು.

ಜಿಲ್ಲಾಸ್ಪತ್ರೆ ಮೆಡಿಸನ್ ವಭಾಗದ ಫಾರಾನಿಕ್ಸ್ ತಜ್ಞ ಡಾ.ವೇಣು ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳಾದ ಡಾ. ರೇಖಾ, ಡಾ. ನಾಗರಾಜ್, ತಾಲ್ಲೂಕು ಆರೋಗ್ಯ ಅಧಿಕಾರಿಗಳಾದ ಡಾ. ಬಿ.ವಿ.ಗಿರೀಶ್, ಡಾ.ವೆಂಕಟೇಶ್, ಡಾ. ರಾಘವೇಂದ್ರ ಪ್ರಸಾದ್, ಡಾ.ಮಧುಕುಮಾರ್, ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್, ಜಿಲ್ಲಾ ವ್ಯವಸ್ಥಾಪಕ ಪ್ರಫುಲ್ಲ ಚಂದ್ರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಹನುಮಂತ ಗೌಡ ಪೂಜಾರ್ ಇದ್ದರು.

# ಮನೆ ನಿರ್ಮಿಸಿಕೊಳ್ಳಲು 10 ಲಕ್ಷ ನೀಡಲು ಮನವಿ; ಶಾಸಕ

» ದಾವಣಗೆರೆ

ದೇವದಾಸಿ ಮಹಿಳೆಯರ ಮಕ್ಕಳಿಗೆ ನಿವೇಶನ ಮತ್ತು ಮನೆ ನಿರ್ಮಿಸಿಕೊಳ್ಳಲು ಸರ್ಕಾರ 10 ಲಕ್ಷ ರೂ. ನೀಡಬೇಕು ಎಂದು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು. ಬೆಂಗಳೂರಿನ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮಂಗಳವಾರ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಜಾತಿಗಳ ರಾಜ್ಯ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ದೇವದಾಸಿ ಮಹಿಳೆಯರಿಗೆ ಪುನರ್ವಸತಿ ಕಲ್ಪಿಸಬೇಕು. ವೈಜ್ಞಾನಿಕವಾಗಿ ದೇವದಾಸಿ ಮಹಿಳೆಯರ ಸ್ಥಿತಿಗತಿ ಬಗ್ಗೆ ಸಮೀಕ್ಷೆ ನಡೆಸಬೇಕು. ಆದರೆ ಅಧಿಕಾರಿಗಳು ಈ ಕೆಲಸ ಮಾಡುತ್ತಿಲ್ಲ ಎಂದು ಮುಖ್ಯಮಂತ್ರಿಗಳ ಗಮನ ತಂದರು. ದೇವದಾಸಿ ಮಹಿಳೆಯರ ಮಕ್ಕಳಿಗೆ ಮನೆ ನಿರ್ಮಿಸಿಕೊಳ್ಳಲು



ಸರ್ಕಾರ ಪ್ರಸ್ತುತ 2 ಲಕ್ಷ ರೂ. ಹಣ ನೀಡುತ್ತಿದೆ. ಆದರೆ 2 ಲಕ್ಷ ರೂ.ಗೆ ಸಿಮೆಂಟ್, ಮರಳು ತರಲು ಆಗುವುದಿಲ್ಲ. ಮನೆ ಕಟ್ಟಿಕೊಳ್ಳುವುದು ಕನಸಿನ ಮಾತು. ಹೀಗಾಗಿ ಸರ್ಕಾರ ಕನಿಷ್ಠ 10 ಲಕ್ಷ ರೂ. ನೀಡಿದರೆ ಒಂದು ಸೂರು ಕಟ್ಟಿಕೊಳ್ಳಲು ಸಾಧ್ಯವಿದೆ. ಮುಖ್ಯಮಂತ್ರಿಗಳು ಈ ಬಗ್ಗೆ ಕ್ರಮ ತೆಗೆದುಕೊಳ್ಳಬೇಕೆಂದು ಮನವಿ ಮಾಡಿದರು.

ಸ್ಥಳೀಯ ಸಂಸ್ಥೆಗಳು ಮತ್ತು ನಗರಾಭಿವೃದ್ಧಿ ಪ್ರಾಧಿಕಾರಗಳಿಂದ ಸಾರ್ವಜನಿಕರಿಗೆ ನಿವೇಶನಗಳಿಗೆ ಅರ್ಜಿ ಆಹ್ವಾನಿಸಿದ ಸಂದರ್ಭದಲ್ಲಿ ದೇವದಾಸಿ ಮಕ್ಕಳಿಗೆ ಶೇ.5ರಷ್ಟು ನಿವೇಶನ ಮೀಸಲಿಡಬೇಕು. ಶಾಲಾ ಕಾಲೇಜು ಮತ್ತು ಪ್ರತಿಷ್ಠಿತ ವಸತಿ ನಿಲಯಗಳಿಗೆ ಹಾಗೂ ಉನ್ನತ ಶಿಕ್ಷಣ ಪಡೆದ ಮಕ್ಕಳಿಗೆ ಸರ್ಕಾರಿ ಹುದ್ದೆಗಳಿಗೆ ನೇರ ನೇಮಕಾತಿ ಮಾಡಿಕೊಳ್ಳಬೇಕು ಎಂದು ಮನವಿ ಮಾಡಿದರು.ದಾವಣಗೆರೆ, ಚಿತ್ರದುರ್ಗ ಸೇರಿದಂತೆ ರಾಜ್ಯದಲ್ಲಿ ಇನ್ನೂ ದೇವದಾಸಿ ಪದ್ಧತಿ ಮುಂದುವರಿದಿದೆ. ಇದನ್ನು ತಡೆಯಲು ಅಧಿಕಾರಿಗಳು ಮುಂದಾಗುತ್ತಿಲ್ಲ. ನರದೌರ್ಬಲ್ಯದಿಂದ ಮಹಿಳೆಯರಿಗೆ ಕೂದಲು ಗಂಟು ಬೀಳುತ್ತವೆ. ಇದು ದೇವರ ಮುಡಿ ಎಂದು ಬಿಟ್ಟುಕೊಳ್ಳುತ್ತಾರೆ. ಈ ಬಗ್ಗೆ ಅಧಿಕಾರಿಗಳು ಅಂತಹ ಮಹಿಳೆಯರಿಗೆ ವೈಜ್ಞಾನಿಕವಾಗಿ ಅದರಿಂದ ಹೊರ ಬರಲು ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿಲ್ಲ. ಜೊತೆಗೆ ನಕಲಿ ಜಾತಿ ಪ್ರಮಾಣ ಸೃಷ್ಟಿ ಮಾಡುವುದು ಹೆಚ್ಚಾಗುತ್ತಿದ್ದರೂ ಅಧಿಕಾರಿಗಳು ತಲೆಕಡಿಸಿಕೊಳ್ಳುವುದಿಲ್ಲ. ಈ ಬಗ್ಗೆ ಮುಖ್ಯಮಂತ್ರಿಗಳು ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಬೇಕೆಂದರು.

## ಪ್ರಮುಖ ಸುದ್ದಿ

### ವಿಧಾನ ಪರಿಷತ್ ಸದಸ್ಯ ನವೀನ್ ಹೇಳಿಕೆ

# ಮಹಿಳೆಯರ ಸ್ವಾವಲಂಬಿ ಬದುಕಿಗೆ ಧರ್ಮಸ್ಥಳ ಯೋಜನೆ ಆಸರೆ

» ಹೊಸದುರ್ಗ

ಕರ್ನಾಟಕದ ಮಹಿಳೆಯರ ಮೇಲೆ ನಂಬಿಕೆ ಇಟ್ಟು ಮಹಿಳೆಯರ ಲವಲಂಬಿ ಬದುಕಿಗಾಗಿ ತಮ್ಮ ಸ್ವಂತ ಕಾಲಿನಲ್ಲಿ ನಿಂತುಕೊಳ್ಳುವ ರೀತಿ ಬೆಳೆಯಬೇಕು ಎಂದು ಪೂಜ್ಯ ಡಾ||ವಿರೇಂದ್ರ ಹೆಗ್ಗಡೆಯವರು ರಾಷ್ಟ್ರೀಕೃತ ಬ್ಯಾಂಕ್ ಗಳ ಮೂಲಕ ಸಾಲ ಸೌಲಭ್ಯಗಳನ್ನು ಕಡಿಮೆ ಬಡ್ಡಿದರದಲ್ಲಿ ಪಡೆದು ಕೃಷಿ,ವಿಧ್ಯಾಭ್ಯಾಸ ಆರ್ಥಿಕ ಮೂಲಭೂತ ಸೌಕರ್ಯಗಳಿಂದ ಹೊಸದುರ್ಗ ತಾಲ್ಲೂಕು ಅಬಿವೃದ್ಧಿಯಾಗಿದೆ .ಮಹಿಳೆಯರು ಸ್ವಾವಲಂಬಿಯಾಗಿ ಮನೆಯ ಅರ್ಥಿಕ ಜವಾಬ್ದಾರಿಯನ್ನು ಶಿಸ್ತಿನಿಂದ ನಿರ್ವಹಿಸಲು ಧರ್ಮಸ್ಥಳ ಸಂಘ ಕಾರಣವಾಗಿದೆ ಎಂದು ವಿಧಾನ ಪರಿಷತ್ ಸಸ್ಯ ಕೆ ಎಸ್ ನವೀನ್ ತಿಳಿಸಿದರು,



ತಾಲ್ಲೂಕಿನ ಅರಲಹಳ್ಳಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಒಕ್ಕೂಟಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಪದಾಧಿಕಾರಿಗಳಿಗೆ ಜವಬ್ದಾರಿ ಹಸ್ತಾಂತರ ಮಾಡಿ ಮಾತನಾಡುತ್ತ ಮಹಿಳೆಯರು ಸ್ವಾವಲಂಬಿಗಳಾಗಬೇಕು.ಒಂದುಕುಟುಂಬ ಅಭಿವೃ□□ □□□□ಂಬವಾಗಬೇಕಾದರೆ ಮಹಿಳೆಯರ ಪಾತ್ರ ಹೆಚ್ಚಿರುತ್ತದೆ ಹೊಸದುರ್ಗಗ ತಾಲ್ಲೂಕು ಬರದನಾಡಾಗಿದ್ದುಆರ್ಥಿಕವಾಗಿ ಯಾವುದೇರೀತಿಯಮೂಲಆದಾಯಗಳು ಇಲ್ಲದಿರುವುದರಿಂದ ಕುಟುಂಬದ ನಿರ್ವಹಣೆ ಕಷ್ಟವಾಗುತ್ತದೆ ಇಂತಹ ಸಂದರ್ಭದಲ್ಲಿ ಧರ್ಮಸ್ಥಳ ಸಂಸ್ಥೆಯವರು ಅತ್ಯಂತ ಕಡ್ಮಿ ಬಡ್ಡಿ ದರದಲ್ಲಿ ಬಿ ಸಿ ಟ್ರಸ್ಟ್ ಮೂಲಕ ಸಾಲ ಸೌಲಭ್ಯ ಒದಗಿಸಿ ತಾಲೂಕಿನ ಬಹುತೇಕ ಕುಟುಂಬಗಳಿಗೆ ಆಸರೆಯಾಗಿದ್ದಾರೆ ಎಂದು ತಿಳಿಸಿದರು. ಹೊಸದುರ್ಗ ಯೋಜನಾಧಿಕಾರಿ ಶಿವಣ್ಣ. ಎಸ್ ಮಾತನಾಡಿ ಕ್ಷೇತ್ರ ಹೊಸದುರ್ಗ ತಾಲ್ಲೂಕಿನಲ್ಲಿಒಟ್ಟು4276ಸಂಘಗಳು ಇದ್ದು 40190 ಸದಸ್ಯರು ಸಂಘದಲ್ಲಿದ್ದಾರೆ.ಪ್ರಸ್ತುತ ವರ್ಷ ತಾಲ್ಲೂಕಿನಲ್ಲಿ 10 ಕೋಟಿ ಲಾಭಾಂಶ ವಿತರಣೆಯನ್ನು ಮಾಡುತ್ತಿದ್ದು ಪ್ರತಿ ಮಹಿಳೆಯರು ತಲಾ 10 ರೂಪಾಯಿ ಕೂಡಿ ಇಟ್ಟ ಹಣ ಮತ್ತು ಸಂಘಗಳಲ್ಲಿ ಅರ್ಥಿಕ ಶಿಸ್ತುಬದ್ಧವಾದ ವ್ಯವಹಾರ ಮಾಡಿದಕ್ಕೆ ಲಾಭಾಂಶ ದೊರಕಿದೆ.

3 ವರ್ಷಕೊಮ್ಮೆ ಒಕ್ಕೂಟ ಪದಾಧಿಕಾರಿಗಳು ಬದಲಾವಣೆ ಮಾಡಲಿದ್ದು ಇವರ ಅವಧಿಯಲ್ಲಿ ಒಕ್ಕೂಟವನ್ನು ಶ್ರದ್ಧಾ ಭಕ್ತಿಯಿಂದ ನಡೆಸಿಕೊಂಡು ಹೋಗುವುದರ ಜೊತೆಗೆ ಮನೆ ಮತ್ತು ಗ್ರಾಮಗಳ ಅಭಿವೃದ್ಧಿಗೆ ಮಹಿಳೆಯರು ಸೇವಕರಾಗಿ ಶ್ರಮಿಸಬೇಕು. ಮಕ್ಕಳಿಗೆ ಉತ್ತಮ ಸಂಸ್ಕೃತಿ ಸಂಸ್ಕಾರ ನೀಡಿ ಪ್ರಜ್ಞಾವಂತರಾಗಿ ಮಾಡುವ ಜವಬ್ದಾರಿ ತಾಯಂದಿರ ಮೇಲಿದೆ ಎಂದು ತಿಳಿಸಿದರು.ಈ ಕಾರ್ಯಕ್ರಮದಲ್ಲಿ ಎಸ್.ಪ್ರಸನ್ನ ಕುಮಾರ್ ರವರು ಅಧ್ಯಕ್ಷತೆ ವಹಿಸಿದ್ದರು,ಶ್ರೀಸ್ವಾಮಿ ಆರ್ ಧರ್ಮಶ್ರೀಗಳು ಮೈಲಾರಲಿಂಗೇಶ್ವರ ದೇವಸ್ಥಾನದ ಸೇವಾ ಸಮಿತಿ, ಶ್ರೀ ಬೋರೇಶ್,ಆಗ್ರೋ ಶಿವಣ್ಣ,ದೀಪಿಕಾ ಕೆ.ಡಿ.ಪಿ ಸದಸ್ಯರು,ಬೀರಪ್ಪ ಉದಗಟ್ಟಿ,ತಾರಮಣಿ,ಶ್ವೇತಾ,ಯಶೋಧ ಗ್ರಾಮಪಂಚಾಯಿತಿ ಉಪಾಧ್ಯಕ್ಷರು ,ಸದಸ್ಯರು ಸಾವಿರಾರು ಮಹಿಳೆಯರು ಹಾಜರಿದ್ದರು.

# 18 ತುಂಬುತ್ತಿರುವ ಸಮಯದಲ್ಲಿ ಮಗನಿಗೆ ತಂದೆಯೊಬ್ಬನ ಬುದ್ಧಿ ಮಾತುಗಳು........



ಕಂದ ನೀನು ಇಂದಿನಿಂದ 18 ವರ್ಷ ತುಂಬಿದ ಕಾರಣಕ್ಕಾಗಿ ಈ ದೇಶದ ಒಬ್ಬ ಪ್ರಜೆಯಾಗಿ ಗುರುತಿಸಿಕೊಳ್ಳಬೇಕಾಗಿದೆ. ಈ ದೇಶದ ಎಲ್ಲಾ ಹಕ್ಕು ಮತ್ತು ಕರ್ತವ್ಯಗಳು ನಿನಗೆ ದೊರೆಯುತ್ತದೆ. ಅಷ್ಟೇ ಅಲ್ಲ ನೀನು ಒಬ್ಬ ಜವಾಬ್ದಾರಿಯುತ ನಾಗರೀಕನು, ಮತದಾರರನ್ನು ಸಹ ಆಗುತ್ತಿರುವೆ......

ಈ ಸಂದರ್ಭದಲ್ಲಿ ಒಬ್ಬ ತಂದೆಯಾಗಿ ನನಗೆ ಒಂದು ಕಡೆ ಹೆಮ್ಮೆ, ಇನ್ನೊಂದು ಕಡೆ ಆತಂಕವಾಗುತ್ತಿದೆ. ಮಗನೇ, ಈ 18 ವರ್ಷಗಳು ನೀನು ನನ್ನ ಕಣ್ಣಳತೆಯ ಮಿತಿಯಲ್ಲಿಯೇ ಬೆಳೆದಿರುವೆ. ಏಕೆಂದರೆ ಮಕ್ಕಳೆಂದರೆ ಅದು ತಂದೆ ತಾಯಿಯ ದೇಹದ ಮುಂದುವರಿದ ಭಾಗ. ಅದಕ್ಕೆ ಎಷ್ಟೇ ಪ್ರತ್ಯೇಕ ಅಸ್ತಿತ್ವವಿದ್ದರೂ ಮೂಲ ಮಾತ್ರ ತಂದೆ ತಾಯಿಯ ದೇಹದ ಮುಂದಿನ ಬೆಳವಣಿಗೆಯಾಗಿಯೇ ಗುರುತಿಸಲ್ಪಡುತ್ತದೆ ಮತ್ತು ಅದು ಅನುವಂಶಿಕವಾಗಿ ಬೆಳೆಯುತ್ತಿರುತ್ತದೆ......

ಇಂತಹ ಸಂದರ್ಭದಲ್ಲಿ ನೀನು ನನ್ನ ಮಗ ಎನ್ನುವುದಕ್ಕಿಂತ ಹೆಚ್ಚಾಗಿ ಇನ್ನು ಮುಂದೆ ನಿಮ್ಮ ಅಪ್ಪ ನಾನಾಗುತ್ತೇನೆ. ನಿನಗೆ ಯೌವ್ವನ ಚಿಗುರುತ್ತಾ ಸಾಗುತ್ತಿದ್ದರೆ, ನನಗೆ ಮುಪ್ಪು ಹತ್ತಿರವಾಗುತ್ತಾ ಇರುತ್ತದೆ. ನಿನ್ನ ಆರೋಗ್ಯ, ದೇಹ, ಮನಸ್ಸು ಬಲಿಷ್ಠವಾಗುತ್ತಿದ್ದರೆ, ನನ್ನ ದೇಹ, ಮನಸ್ಸು, ನಿಧಾನವಾಗಿ ಕುಸಿಯತೊಡಗುತ್ತದೆ. ನಿನ್ನ ನನ್ನ ವಯಸ್ಸಿನ ಅಂತರ ಕೇವಲ ಇಷ್ಟಕ್ಕೆ ನಿಲ್ಲುವುದಿಲ್ಲ. ಈ ನೆಲದ ಸಾಂಸ್ಕೃತಿಕ ವ್ಯಕ್ತಿತ್ವವು ಸಹ ನಮ್ಮಿಬ್ಬರ ಮಧ್ಯೆ ಸಾಕಷ್ಟು ಅಂತರವನ್ನು ಸೃಷ್ಟಿ ಮಾಡಿರುತ್ತದೆ. ನಿನ್ನ ಯೋಚನಾಲಹರಿ, ನನ್ನ ಯೋಚನೆ ಲಹರಿ ಸಾಕಷ್ಟು ಭಿನ್ನವಾಗಿರುವ ಎಲ್ಲ ಸಾಧ್ಯತೆಯೂ ಇರುತ್ತದೆ. ಇದು ವೈಯಕ್ತಿಕ ನಿಲುವುಗಳ ವ್ಯತ್ಯಾಸಗಳಾದರೆ, ಇನ್ನು ಸಾಮಾಜಿಕವಾಗಿ, ಆರ್ಥಿಕವಾಗಿ, ಪ್ರಾಕೃತಿಕವಾಗಿ ಸಾಕಷ್ಟು ವೈರುಧ್ಯಗಳು ನಮ್ಮ ನಡುವೆ ಏರ್ಪಟ್ಟಿದೆ.......

ಕಳೆದ 40/50 ವರ್ಷಗಳಿಗೆ ಹೋಲಿಸಿದರೆ ಗಾಳಿ, ನೀರು, ಆಹಾರ ಸಾಕಷ್ಟು ವಿಷಯುಕ್ತವಾಗಿದೆ. ಅದೇ ಸಮಯದಲ್ಲಿ ಮಾನವೀಯ ಮೌಲ್ಯಗಳು ದುರ್ಬಲವಾಗಿದೆ ಅಥವಾ ವ್ಯಾಪಾರಿಕರಣವಾಗಿದೆ. ಮನುಷ್ಯ ಸಂಬಂಧಗಳು ಮೊದಲಿನಷ್ಟು ಆಳ ಮತ್ತು ಗಟ್ಟಿತನವನ್ನು ಹೊಂದಿಲ್ಲ. ಬದುಕು ಎಂದಿನಂತೆ ಸರಳವಾಗಿಲ್ಲ, ಸಂಕೀರ್ಣವಾಗಿದೆ. ಅವಕಾಶಗಳು, ವೇದಿಕೆಗಳು ಸಂಪರ್ಕಗಳು ಹಿಂದಿನಂತಿಲ್ಲ. ಅದು ಸಾಕಷ್ಟು ಸಾಧ್ಯತೆಗಳನ್ನು ನಿನಗೆ ಕೊಡುತ್ತಿದೆ. ತಂತ್ರಜ್ಞಾನ, ಆಧುನಿಕತೆ ವೇಗವಾಗಿ ಬೆಳೆಯುತ್ತಿದೆ.....

ಇಂತಹ ಸನ್ನಿವೇಶದಲ್ಲಿ ನನ್ನ ಸಲಹೆಗಳು ನಿನಗೆ ಮಾರ್ಗದರ್ಶನವೂ ಆಗಬಹುದು ಅಥವಾ ನಿಯಂತ್ರಿತ ಮಿತಿಗಳು ಆಗಬಹುದು. ಏಕೆಂದರೆ ನನ್ನ ಸಲಹೆಗಳು ನೀನು ನನ್ನ ಮಗ ಎನ್ನುವ ಒಂದು ಮಿತಿಗೆ ಒಳಪಟ್ಟರೆ, ನನಗಾದ ಅನುಭವಗಳು ನಿನ್ನ ಮೇಲೆ ಹೇರಿಕೆಯೂ ಆಗಬಹುದು. ಆದರೂ ತಂದೆ ಎನ್ನುವ ಜವಾಬ್ದಾರಿ ಅರಿತು ಸಾಧ್ಯವಾದಷ್ಟು ನಿನ್ನ ಮನಸ್ಥಿತಿ, ಪರಿಸ್ಥಿತಿಯನ್ನ ಅರಿತು ಕೆಲವು ಸಲಹೆಗಳನ್ನು ಕೊಡಲು ಇಚ್ಚಿಸುತ್ತೇನೆ........

ಈ ವಯಸ್ಸಿನಲ್ಲಿ ಅದು ನಿನಗೆ ಅರ್ಥವಾಗಬಹುದು ಅಥವಾ ಅರ್ಥವಾಗದೆಯೂ ಇರಬಹುದು. ಅದನ್ನು ನೀನು ಸ್ವೀಕರಿಸಬಹುದು ಅಥವಾ ತಿರಸ್ಕರಿಸಬಹುದು ಅಥವಾ ನಿರ್ಲಕ್ಷಿಸಿಬಹುದು. ಆದರೂ ಮುಂದಿನ ದಿನಗಳಲ್ಲಿ ಈ ಸಲಹೆಗಳು ನಿನ್ನ ಉಪಯೋಗಕ್ಕೆ ಬರಬಹುದು ಎಂಬ ಭರವಸೆಯೊಂದಿಗೆ ಹೇಳುತ್ತಿದ್ದೇನೆ......

ಕಂದ, ನನ್ನ ಅಪ್ಪನ ಕಾಲಕ್ಕೆ ಸ್ವಾತಂತ್ರ್ಯ ಆಗತಾನೇ ಬಂದಿತ್ತು. ಅವರಿಗೆ ಕೇವಲ ಏಳು ರೂಪಾಯಿ ಸರ್ಕಾರಿ ಶಿಕ್ಷಕ ವೃತ್ತಿ ಸಿಕ್ಕಿತ್ತು. ನಮ್ಮ ಮನೆಯ ಬಾಡಿಗೆ ಎರಡು ರೂಪಾಯಿಗಳು. ಮಳೆ ಬಂದಾಗ ಮನೆ ತುಂಬಾ ನೀರು ಸೋರುತಿತ್ತು. ಆಗಾಗ ಹಾವು ಚೇಳುಗಳು ಮನೆಯೊಳಗೆ ನುಗ್ಗುತ್ತಿದ್ದವು. ನಮ್ಮ ಸ್ಥಳೀಯ ಆಹಾರದಂತೆ ಮುದ್ದೆಯೆ ನಮ್ಮ ದಿನನಿತ್ಯದ ಹಸಿವನ್ನು ತುಂಬಿಸುತ್ತಿದ್ದ ಭಕ್ಷ ಭೋಜನ. ಆಗಿನ ಕಾಲಕ್ಕೆ ಹಬ್ಬದಲ್ಲಿ ಅನ್ನ ತಿನ್ನುವುದು ಎಂಬುದು ಒಂದು ಗಾದೆ ಮಾತಾಗಿತ್ತು. ಸಿಹಿ ಅಥವಾ ಮಾಂಸಹಾರ ತೀರಾ ಅಪರೂಪ ಮತ್ತು ಅದೇ ಒಂದು ದೊಡ್ಡ ಸಂಭ್ರಮ. ಹೊಸ ಬಟ್ಟೆಗಳು ಯುಗಾದಿ ಹಬ್ಬಕ್ಕೆ ಮಾತ್ರವೇ ಸಿಗುತ್ತಿತ್ತು. ಸ್ನಾನ ಬಹುತೇಕ ವಾರಕ್ಕೆ ಒಂದು ದಿನ, ಅದು ಸಹ ಶನಿವಾರವೇ ಆಗಿರುತ್ತಿತ್ತು.. ಮನೆಯ ಎಲ್ಲರೂ ಒಂದೇ ಚಾಪೆಯಲ್ಲಿ ಒಂದೇ ಕಂಬಳಿಯನ್ನು ಹೊಂದು ಮಲಗುತ್ತಿದ್ದೆವು.......

ಹಸಿವೆಂಬುದು ಸದಾ ಕಾಡುತ್ತಿತ್ತು. ಏಕೆಂದರೆ ಆಗಿನ ದೈಹಿಕ ಚಟುವಟಿಕೆಗೆ ಮನೆಯಲ್ಲಿ ಮಾಡುತ್ತಿದ್ದ ಆಹಾರ ಅಥವಾ ಶಾಲೆಯಲ್ಲಿ ಕೊಡುತ್ತಿದ್ದ ಉಪ್ಪಿಟ್ಟು ಸಾಕಾಗುತ್ತಿರಲಿಲ್ಲ. ಎಲ್ಲೋ ಮದುವೆಯೋ ಅಥವಾ ಊರಿನ ಜಾತ್ರೆಯೋ ನಡೆದರೆ ಅಲ್ಲಿ ಸಿಗುತ್ತಿದ್ದ ಆಹಾರವೇ ನಮಗೆ ಮೃಷ್ಟಾನ್ನ.....

ಆಗ ನಮ್ಮ ತಂದೆಯವರ ಆದ್ಯತೆ ನಮ್ಮ ಮಕ್ಕಳನ್ನ ಕನಿಷ್ಠ ಎಸ್ ಎಸ್ ಎಲ್ ಸಿ ಅಥವಾ ಪಿಯುಸಿ ಸಾಧ್ಯವಾದರೆ ಒಂದು ಪದವಿಯನ್ನು ಮಾಡಿಸಿ, ಏನಾದರೂ ಸರ್ಕಾರಿ ಉದ್ಯೋಗ ಸಿಕ್ಕಿ, ಮಗ ನಗರದಲ್ಲಿ ಸ್ವತಂತ್ರ ಜೀವನ ಸಾಗಿಸಿದರೆ



ಸಾಕು ಎಂದು ತುಂಬಾ ಆಸೆ ಪಡುತ್ತಿದ್ದರು. ಕೃಷಿ ಅಥವಾ ಖಾಸಗಿ ವ್ಯವಹಾರ ಅಷ್ಟೇನೂ ಲಾಭದಾಯಕವಾಗಿರಲಿಲ್ಲ. ಅದರಿಂದ ಇವನ ಬದುಕು ಸಾಗುವುದು ಕಷ್ಟ. ಸರ್ಕಾರಿ ಉದ್ಯೋಗ ದೊರಕಿದರೆ ಜೀವನಕ್ಕೆ ಶಾಶ್ವತವಾಗಿ ಒಂದು ದಾರಿ ಆಗುತ್ತದೆ ಎಂಬ ಆಸೆ ಅವರದಾಗಿತ್ತು....

ಮಗನೇ ಈಗ ಕಾಲ ಅಥವಾ ಸಾಮಾಜಿಕ ವಾತಾವರಣ ಸಂಪೂರ್ಣ ಬದಲಾಗಿದೆ. ಅಂದು ನಾನು ನಗರಕ್ಕೆ ಬಂದು ಸಾಕಷ್ಟು ಸಂಘರ್ಷಗಳ ನಡುವೆ ಪ್ರತಿಕ್ಷಣ ಶ್ರಮ ಪಡುತ್ತಾ ಜವಾಬ್ದಾರಿಯಿಂದ ಬದುಕು ನಿರ್ವಹಿಸಲು ತುಂಬಾ ಕಷ್ಟವಾಯಿತು. ಹೇಗೋ ಒಂದು ಹಂತ ತಲುಪಿದ ಮೇಲೆ ನೀನು ಜನಿಸಿದೆ. ಆಗ ನನ್ನೆಲ್ಲಾ ಕಷ್ಟಗಳು ನಿನಗೆ ಬಾಧಿಸದಿರಲೆಂದು ನಿನ್ನನ್ನು ಹೆಚ್ಚು ಪ್ರೀತಿಯಿಂದ ಯಾವುದೇ ನೋವಾಗದಂತೆ, ನೀನು ಕಷ್ಟ ಪಡದಂತೆ ಸಾಕಬೇಕೆಂದು ಬಯಸಿ ಹಾಗೆಯೇ ನೋಡಿಕೊಳ್ಳುತ್ತಿದ್ದೆ. ನೀನು ಗಣಿತದ ಲೆಕ್ಕಗಳು ಹೇಳು, ನಾನು ಕೂಡಿ ಕಳೆದು ಗುಣಿಸುವುದು ಮಾಡುತ್ತೇನೆ ಎಂದಾಗ, ನಾನು ಅತ್ಯಂತ ಸರಳ ಸಂಖ್ಯೆಗಳನ್ನು ಕೊಡುತ್ತಿದ್ದೆ. ಏಕೆಂದರೆ ಸಂಕೀರ್ಣ ಸಂಖ್ಯೆಗಳನ್ನು ನೀಡಿದರೆ ನೀನು ಎಲ್ಲಿ ಕಷ್ಟ ಪಡುತ್ತಿಯೋ ಎನ್ನುವಷ್ಟು ತೀವ್ರವಾಗಿ ನಿನ್ನನ್ನು ಪ್ರೀತಿಸುತ್ತಿದ್ದೆ......

ಆದರೆ ಜಾಗತೀಕರಣದ ನಂತರ ಬದುಕು ಅಷ್ಟು ಸುಲಭವಾಗಿ ಮುನ್ನಡೆಯಲು ಸಾಧ್ಯವಾಗುತ್ತಿಲ್ಲ. ಅನೇಕ ಎರಡು ತೊಡರುಗಳು, ಆರ್ಥಿಕ ಸಂಕಷ್ಟಗಳು ನನ್ನನ್ನು ಕಾಡಲು ಪ್ರಾರಂಭಿಸಿದೆ. ಇಂತಹ ಸಂದರ್ಭದಲ್ಲಿ ನೀನು ಈಗಿನ ಸಾಮಾಜಿಕ ಪರಿಸ್ಥಿತಿಯಲ್ಲಿ ದೊಡ್ಡ ದೊಡ್ಡ ಕನಸುಗಳನ್ನು, ಯಶಸ್ಸನ್ನು ಬಯಸುತ್ತಿರುವೆ. ನನ್ನ ದೃಷ್ಟಿಕೋನದ ಯಶಸ್ಸಿಗೂ, ನಿನ್ನ ದೃಷ್ಟಿಕೋನದ ಯಶಸ್ಸಿಗೂ ಸಾಕಷ್ಟು ವ್ಯತ್ಯಾಸ ಇದೆ. ಕೇವಲ ವೈಯಕ್ತಿಕ ನೆಲೆಯಲ್ಲಿ ಮಾತ್ರವಲ್ಲ ಸಾಮಾಜಿಕವಾಗಿ ಸಹ ಇಂದು ವಸ್ತು ಸಂಸ್ಕೃತಿ, ಕೊಳ್ಳುಬಾಕ ಸಂಸ್ಕೃತಿ, ಹೋಲಿಕೆಯ ಸಂಸ್ಕೃತಿ, ಅಪ ಮೌಲ್ಯಗೊಂಡ ಸಂಸ್ಕೃತಿ, ನಿನ್ನನ್ನು ಅಕ್ರಮಿಸಿಕೊಂಡಿವೆ. ಕಾಲದ ಪಯಣದಲ್ಲಿ ಈ ಬದಲಾವಣೆಗಳು ಸಹಜವೇನೋ ನಿಜ. ಆದರೆ ಆ ಬದಲಾವಣೆಗಳು ನಿನ್ನ ಭವಿಷ್ಯವನ್ನು ಮುಸುಕಾಗಿಸಬಹುದು, ಈ ವ್ಯವಸ್ಥೆ ಇನ್ನೂ ಸಂಕೀರ್ಣ ಸಂಘರ್ಷಮಯವಾಗಿ ನಿನ್ನ ನೆಮ್ಮದಿಯನ್ನು ಕಸಿದುಕೊಳ್ಳಬಹುದು, ನಿನ್ನ ಆರೋಗ್ಯವನ್ನು ಹಾಳುಮಾಡಬಹುದು ಎಂಬ ಆತಂಕ ಇರುವುದಂತೂ ನಿಜ......

ಬಹುಶಃ ಹಿಂದೆ ನಮ್ಮ ತಂದೆ ತಾಯಿಗಳು ಇದೇ ರೀತಿ ಆತಂಕ ಪಟ್ಟಿರಬಹುದು. ಮುಂದಿನ ಭವಿಷ್ಯ ಹೇಗಾಗುತ್ತದೋ ತಿಳಿದಿಲ್ಲ. ಆದರೆ ಈ ಕ್ಷಣದಲ್ಲಿ ಯೋಚಿಸಿದಾಗ ಮುಂದಿನ ದಿನಗಳು ನೀನು ತಿಳಿದಿರುವುದಕ್ಕಿಂತ ಹೆಚ್ಚು ಸವಾಲುಗಳನ್ನು ನೀಡಬಹುದು ಎಂದು ಅನಿಸುತ್ತಿದೆ. ಮಗನೇ, ಇಂದು ಜಗತ್ತು ತುಂಬಾ ಸ್ಪರ್ಧಾತ್ಮಕವಾಗಿದೆ. ಹಾಗೆಯೇ ಮನುಷ್ಯ ಸಂಬಂಧಗಳು ಶಿಥಿಲವಾಗಿ, ಹಣ ಕೇಂದ್ರೀಕೃತವಾಗುತ್ತಿದೆ. ಇದು ಒಳ್ಳೆಯ ಬೆಳವಣಿಗೆಯಲ್ಲ. ಇದರಿಂದಾಗಿ ದೇಹ, ಮನಸ್ಸುಗಳು ಸಾಕಷ್ಟು ಒತ್ತಡಕ್ಕೆ ಸಿಲುಕುತ್ತವೆ. ಬಹುತೇಕ ಯಶಸ್ಸಿಗಿಂತ ನಿರಾಸೆಗಳು, ಅಸಹಾಯಕತೆಗಳೇ ಮನೆಮಾಡುತ್ತವೆ.....

ಸಾಮೂಹಿಕ ಯಶಸ್ಸನ್ನು ಯಾರು ಬಯಸುತ್ತಿಲ್ಲ. ಕೆಲವೇ ಕೆಲವರ ವೈಯಕ್ತಿಕ ಯಶಸ್ಸು ಸಮಾಜದಲ್ಲಿ ಅಂತರವನ್ನು ಹೆಚ್ಚಿಸುತ್ತಿದೆ. ಹಂಚಿಕೊಂಡು ತಿನ್ನುವ ಪರಿಸ್ಥಿತಿ ಮಾಯವಾಗಿ ಕಿತ್ತುಕೊಂಡು ತಿನ್ನುವ ಅನಾಗರಿಕ ವರ್ತನೆಗಳು ಸಮಾಜದಲ್ಲಿ ಸಹಜವಾಗುತ್ತಿವೆ. ಇಂತಹ ಸನ್ನಿವೇಶದಲ್ಲಿ ನಾನು ಗೊಂದಲಕ್ಕೆ ಒಳಗಾಗಿದ್ದೇನೆ......

ಒಳ್ಳೆಯದು ಒಳ್ಳೆಯದಾಗಿಯೇ ಇಲ್ಲದಿರುವಾಗ, ಒಳ್ಳೆಯವರು ಬದುಕುವುದೇ ಕಷ್ಟವಾಗುತ್ತಿರುವಾಗ, ಕೆಟ್ಟವರು ಸಮಾಜದಲ್ಲಿ ವಿಜೃಂಭಿಸುತ್ತಿರುವಾಗ, ಕೆಟ್ಟವರೇ ಜನಪ್ರಿಯತೆ, ವ್ಯಾವಹಾರಿಕ ಯಶಸ್ಸನ್ನು ಪಡೆಯುತ್ತಿರುವಾಗ, ಅದರ ಸಂಪೂರ್ಣ ವಿವರಗಳು ನನಗೆ ಸ್ಪಷ್ಟವಾಗಿ ತಿಳಿದಿರುವಾಗ, ನಾನು ನಿನಗೆ ಏನೆಂದು ಮಾರ್ಗದರ್ಶನ ಮಾಡಬೇಕು. ಸತ್ಯ, ಪ್ರಾಮಾಣಿಕ, ನಿಷ್ಠೆ, ಮಾನವಿಯ ಮೌಲ್ಯಗಳನ್ನು ನಿನಗೆ ಭೋದಿಸಬೇಕೇ ಅಥವಾ ಸಾಂದರ್ಭಿಕವಾಗಿ ಏನನ್ನಾದರೂ ಮಾಡಿ ಜೀವನದಲ್ಲಿ ಯಶಸ್ಸನ್ನು ಪಡೆ ಎಂದು ಹೇಳಬೇಕೇ ಈ ಎರಡರ ನಡುವೆ ನನಗೂ ಗೊಂದಲಗಳಿವೆ.....

ಏಕೆಂದರೆ ಒಳ್ಳೆಯದನ್ನು ಹೇಳುವುದು ತುಂಬಾ ಸುಲಭ. ಆದರೆ ಅದನ್ನು ಅನುಸರಿಸುವ ಮನಸ್ಥಿತಿ ನಿನ್ನದಾಗಿದ್ದರೆ ತುಂಬಾ ಸಂತೋಷ. ಇಲ್ಲದಿದ್ದರೆ ಆ ಸೂತ್ರಗಳು ನಿನ್ನ ಅಪ ಯಶಸ್ಸಿಗೆ ಕಾರಣವಾಗಿ ಅದರ ಹೊಣೆಗಾರ ನಾನಾಗುತ್ತೇನೇನೋ ಎನ್ನುವ ಅಳುಕು ಸಹ ನನಗಿದೆ. ಅಂದಿನ ಆ ಸಾಮಾಜಿಕ ವಾತಾವರಣ ಮಾಯವಾಗಿದೆ. ಸಕ್ಸಸ್ ಅಟ್ ಎನಿಕಾಸ್ಟ್ ಎನ್ನುವ ಸೂತ್ರ ಈಗ ಚಲಾವಣೆಯಲ್ಲಿದೆ. ಒಳ್ಳೆಯ ಮಾರ್ಗದಲ್ಲಿ ಯಶಸ್ವಿಯಾಗಿ ಮುನ್ನಡೆ ಎಂದು ಧೈರ್ಯವಾಗಿ ಹೇಳುವ ಸ್ಥಿತಿಯಲ್ಲಿ ನಾನಿಲ್ಲ. ಹಾಗೆಂದು ಕೆಟ್ಟವನಾಗು ಎನ್ನುವುದು ಮತ್ತಷ್ಟು ತಪ್ಪಾಗುತ್ತದೆ....

ಮಗನೇ ನಾನೇನೋ ವ್ಯಾವಹಾರಿಕ ಜಗತ್ತಿನಿಂದ ಹೊರಬಂದು ಸಾಮಾಜಿಕ ಪರಿವರ್ತನೆಗಾಗಿ ಯಾವ ನಿರೀಕ್ಷೆಯು ಇಲ್ಲದೆ ಕೆಲಸ ಮಾಡುತ್ತಿದ್ದೇನೆ. ಹಾಗೆಂದು ನಿನ್ನನ್ನು ನಿರ್ಲಕ್ಷಿಸಲು ಸಾಧ್ಯವಾಗುತ್ತಿಲ್ಲ ಅಥವಾ ನಿನಗಾಗಿಯೇ ನನ್ನ ಬದುಕನ್ನು ಸವೆಸಲು ಸಾಧ್ಯವಾಗುತ್ತಿಲ್ಲ. ನನ್ನ ಮಗ ಮತ್ತು ಈ ಸಮಾಜದ ಆಯ್ಕೆಯಲ್ಲಿ ಅನಿವಾರ್ಯವಾಗಿ ಸಮಾಜವನ್ನೇ ಆಯ್ಕೆ ಮಾಡಿಕೊಂಡಿದ್ದೇನೆ. ಇದರ ನಡುವೆ ನಿನ್ನನ್ನು ಸರಿಯಾಗಿ ಬೆಳೆಸದ ಆರೋಪ ನನ್ನ ಮೇಲೆ ಸಹಜವಾಗಿಯೇ ಬರುತ್ತದೆ.....

ಒಬ್ಬ ಮಗನಿಗಾಗಿ ಹೆಚ್ಚು ಶ್ರಮಪಡಲು ಅಥವಾ ಮಗನ ಬದುಕನ್ನು ನಿರ್ಲಕ್ಷಿಸಿ ಅಥವಾ ಸವಾಲಿಗೆ ಒಡ್ಡಿ ಇಡೀ ಸಮಾಜದ ಪರಿವರ್ತನೆಗಾಗಿ ಪ್ರಯತ್ನಿಸುವ ಆಯ್ಕೆಯಲ್ಲಿ ಸಮಾಜವನ್ನೇ ಆಯ್ಕೆ ಮಾಡಿಕೊಂಡಿರುವ ಬಗ್ಗೆ ನನಗೆ ಆತ್ಮ ತೃಪ್ತಿ ತಂದಿದೆ. ಇದರ ನಡುವೆ ನೀನು 18 ದಾಟುತ್ತಿದ್ದೀಯಾ. ನಿನ್ನ ಬೇಡಿಕೆಗಳು ಇಂದಿನ ಎಲ್ಲ ಸಾಮಾನ್ಯ ಯುವ ಜನಾಂಗದಂತೆ ಸಾಕಷ್ಟು ಕನಸುಗಳನ್ನು ಹೊಂದಿವೆ. ಕರುಳ ಬಳ್ಳಿಯ ಮೂಲೆಯಲ್ಲಿ ನಿನ್ನ ಆಸೆಗಳಿಗೆ ಸ್ಪಂದಿಸಬೇಕೆಂದು ಸಾಕಷ್ಟು ಮನಸ್ಸು ಕಾಡುತ್ತದೆ. ಅದಕ್ಕಾಗಿ ಸಣ್ಣ ಪ್ರಯತ್ನಗಳು ಇದೆ. ಆದರೆ ಅದನ್ನು ನಿರ್ವಹಿಸಲು ಸಾಧ್ಯವಾಗುತ್ತಿಲ್ಲ ಅದಕ್ಕಾಗಿ ಕ್ಷಮೆ ಇರಲಿ......

ಹೇಳಲು ಇನ್ನೂ ಸಾಕಷ್ಟು ಇದೆ. ಆದರೆ ನನ್ನ ಬುದ್ಧಿಮಾತುಗಳು ಇವತ್ತಿಗೆ ಮಾತ್ರ ಮುಗಿಯುವುದಿಲ್ಲ. ಅದು ನಿರಂತರ. ಕೊನೆಯದಾಗಿ ಒಂದು ಕಿವಿಮಾತು ಮಗನೇ, ನೀನು ಸುಖವಾಗಿ, ನೆಮ್ಮದಿಯಿಂದ, ಸಂತೋಷವಾಗಿ ಇರುವಾಗ ನನ್ನ ನೆನಪಾಗದಿದ್ದರೂ ಚಿಂತೆ ಇಲ್ಲ. ನನ್ನ ಮುಪ್ಪಿನ ಸಮಯದಲ್ಲಿ ನೀನು ನನಗೆ ನೆರವಾಗದಿದ್ದರೂ ಪರವಾಗಿಲ್ಲ. ಆದರೆ ನಿನ್ನ ಸಂಕಷ್ಟದ ಸಮಯದಲ್ಲಿ. ನಿನ್ನ ನೋವಿನ ಸಂದರ್ಭದಲ್ಲಿ, ನನ್ನ ನೆನಪಾದರೆ ಅಷ್ಟೇ ಸಾಕು. ನಾನು ಬದುಕಿದ್ದರೆ ನಿನಗೆ ಸಹಾಯವನ್ನು, ಸಲಹೆ ಸೂಚನೆಯನ್ನು ನೀಡುತ್ತೇನೆ. ಇಲ್ಲದಿದ್ದರೆ ನನ್ನ ಈ ತಿಳುವಳಿಕೆಯ ಮಾತುಗಳಾದರು ನಿನಗೆ ನೆನಪಾಗಲಿ....

ಒಳ್ಳೆಯದಾಗಲಿ ಮಗ..... ಪ್ರಬುದ್ಧ ಮನಸ್ಸು ಪ್ರಭುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T